ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: | ಸಂಚಿಕೆ: 126 Issue: | ರಾಯಚೂರು Raichur | 28-10-2026 | ಬುಧವಾರ Wednesday | ಪುಟ: 04 Page: | ಬೆಲೆ: ₹ 2.00 Price: | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685







## ಕಮಲ ಅರಳಿಸಿದ ಶಶೀಲ್ ನಮೋಶಿ: 3,297 ಮತಗಳ ಅಂತರದಿಂದ ಗೆಲುವು

ಕಲಬುರಗಿ, ಅ.27: ಕರ್ನಾಟಕ ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಅವರು ಸತತ ಎರಡನೇ ಬಾರಿಗೆ ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ ಅವರನ್ನು 3,297 ಮತಗಳ ಅಂತರದಿಂದ ಹಿಂದಿಕ್ಕಿರುವ ನಮೋಶಿ, ಪ್ರಥಮ ಪ್ರಾಶಸ್ತ್ಯದ ಮತ ಎಣಿಕೆಯಲ್ಲಿಯೇ ಗೆಲುವಿಗೆ ಅಗತ್ಯವಿದ್ದ ನಿಗದಿತ ಮತಗಳ ಕೋಟಾವನ್ನು ದಾಟುವ ಮೂಲಕ ವಿಜಯದ ನಗೆ ಬೀರಿದ್ದಾರೆ.



ನಗರದ ಗುಲಬರ್ಗಾ ವಿಶ್ವವಿದ್ಯಾಲಯದ ಗಣಿತ ವಿಭಾಗದ ಭಾಸ್ಕರ್ ಸಭಾಂಗಣದಲ್ಲಿ ಮಂಗಳವಾರ ನಡೆದ ಮತ ಎಣಿಕೆ ಪ್ರಕ್ರಿಯೆಯಲ್ಲಿ ಆರಂಭದಿಂದಲೇ ಮುನ್ನಡೆ ಕಾಯ್ದುಕೊಂಡ ನಮೋಶಿ, ಒಟ್ಟು 15,596 ಪ್ರಥಮ ಪ್ರಾಶಸ್ತ್ಯದ ಮತಗಳನ್ನು ಪಡೆದು ಗೆಲುವು ಸಾಧಿಸಿದರು. ಅವರ ಸಮೀಪದ ಪ್ರತಿಸ್ಪರ್ಧಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ 12,299 ಮತಗಳನ್ನು ಪಡೆದರು.

ಈಶಾನ್ಯ ಶಿಕ್ಷಕರ ಕ್ಷೇತ್ರದ ವ್ಯಾಪ್ತಿಯ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ಶಿಕ್ಷಕ ಮತದಾರರು ಈ ಚುನಾವಣೆಯಲ್ಲಿ ಮತದಾನದ ಹಕ್ಕು ಹೊಂದಿದ್ದರು.

ಕ್ಷೇತ್ರದಲ್ಲಿ ಒಟ್ಟು 34,784 ಮತದಾರರಿದ್ದು, ಈ ಪೈಕಿ 30,253 ಮತಗಳು ಚಲಾವಣೆಯಾಗಿದ್ದವು. ಮತ ಎಣಿಕೆ ವೇಳೆ 28,380 ಮತಗಳು ಸಿಂಧುವಾಗಿದ್ದು, 1,873 ಮತಗಳು ತಿರಸ್ಕೃತಗೊಂಡಿವೆ.

ಚುನಾವಣಾ ಆಯೋಗದ ನಿಯಮಾನುಸಾರ ಒಟ್ಟು ಸಿಂಧು ಮತಗಳ ಆಧಾರದಲ್ಲಿ ಗೆಲುವಿಗೆ 14,191 ಮತಗಳ ಕೋಟಾ ನಿಗದಿಪಡಿಸಲಾಗಿತ್ತು. ಆದರೆ ಶಶೀಲ್ ಜಿ. ನಮೋಶಿ ಅವರು ಮೊದಲ ಪ್ರಾಶಸ್ತ್ಯದ ಮತ ಎಣಿಕೆಯಲ್ಲಿಯೇ 15,596 ಮತಗಳನ್ನು ಗಳಿಸಿ ನಿಗದಿತ ಕೋಟಾಕ್ಕಿಂತ 1,405 ಮತಗಳನ್ನು ಹೆಚ್ಚುವರಿಯಾಗಿ ಪಡೆದರು.

ಮೂರು ಸುತ್ತುಗಳಲ್ಲಿ ನಡೆದ ಪ್ರಥಮ ಪ್ರಾಶಸ್ತ್ಯದ ಮತ ಎಣಿಕೆಯ ಪ್ರತಿಯೊಂದು ಸುತ್ತಿನಲ್ಲಿಯೂ ನಮೋಶಿ ಮುನ್ನಡೆ ಕಾಯ್ದುಕೊಂಡಿದ್ದರು. ಅಂತಿಮವಾಗಿ ಗೆಲುವಿಗೆ ಅಗತ್ಯವಿರುವ ಮತಗಳ ಕೋಟಾವನ್ನು ದಾಟಿದ ಹಿನ್ನೆಲೆಯಲ್ಲಿ ಎರಡನೇ ಪ್ರಾಶಸ್ತ್ಯದ ಮತ ಎಣಿಕೆಯ ಅಗತ್ಯವಿಲ್ಲದೆ ಅವರನ್ನು ವಿಜಯಿ ಎಂದು ಘೋಷಿಸಲಾಯಿತು.

ಚುನಾವಣಾಧಿಕಾರಿ ಜಹೀರಾ ನಸೀಮ್ ಅವರು ಅಧಿಕೃತವಾಗಿ ಫಲಿತಾಂಶ ಪ್ರಕಟಿಸಿ, ವಿಜೇತ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಅವರಿಗೆ ಚುನಾವಣಾ ಪ್ರಮಾಣಪತ್ರ ವಿತರಿಸಿದರು.

ಈ ಬಾರಿಯ ಚುನಾವಣೆಯಲ್ಲಿ ಒಟ್ಟು 13 ಅಭ್ಯರ್ಥಿಗಳು ಕಣದಲ್ಲಿದ್ದರು. ಪ್ರಮುಖವಾಗಿ ಬಿಜೆಪಿ 2ನೇ ಪುಟಕ್ಕೆ

## ಪೆಟ್ರೋಲ್ ಬಂಕ್‌ನಲ್ಲಿ ಅಗ್ನಿ ಅವಘಡ:
### ಬೆಂಕಿಗೆ ಆಹುತಿಯಾದ ಪಲ್ಸರ್ ಬೈಕ್

ಮಾನ್ವಿ: ಪಟ್ಟಣದ ರಾಯಚೂರು ರಸ್ತೆಯಲ್ಲಿರುವ ಪೆಟ್ರೋಲ್ ಬಂಕ್ ಒಂದರಲ್ಲಿ ಮಂಗಳವಾರ ಸಂಜೆ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡು ಪಲ್ಸರ್ 220 ಬೈಕ್ ಸಂಪೂರ್ಣ ಸುಟ್ಟು ಭಸ್ಮವಾದ ಘಟನೆ ನಡೆದಿದೆ.



ಪೆಟ್ರೋಲ್ ಬಂಕ್‌ನಲ್ಲಿ ಇಂಧನ ತುಂಬಿಸಿಕೊಂಡ ಬಳಿಕ ಸವಾರ ಬೈಕ್ ಚಾಲನೆ ಮಾಡುತ್ತಿದ್ದಂತೆಯೇ ಏಕಾಏಕಿ ಬೆಂಕಿ ಹೊತ್ತಿಕೊಂಡಿದೆ. ಕ್ಷಣಾರ್ಧದಲ್ಲಿ ಬೆಂಕಿಯ ಜ್ವಾಲೆಗಳು ಬೈಕ್‌ನ್ನು ಆವರಿಸಿದ್ದು, ವಾಹನ ಸಂಪೂರ್ಣವಾಗಿ ಸುಟ್ಟುಹೋಗಿದೆ.

ಪೆಟ್ರೋಲ್ ಬಂಕ್ ಆವರಣದಲ್ಲಿಯೇ ಈ ಘಟನೆ ಸಂಭವಿಸಿದ್ದರಿಂದ ಹೆಚ್ಚಿನ ಅನಾಹುತ ಉಂಟಾಗುವ ಆತಂಕ ಎದುರಾಗಿತ್ತು. ಘಟನೆ ಕುರಿತು ಮಾಹಿತಿ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಂದಿಸುವಲ್ಲಿ ಯಶಸ್ವಿಯಾದರು.

ಅಗ್ನಿಶಾಮಕ ಸಿಬ್ಬಂದಿಯ ಸಮಯಪ್ರಜ್ಞೆ ಹಾಗೂ ತ್ವರಿತ ಕಾರ್ಯಾಚರಣೆಯಿಂದ ಬೆಂಕಿ ಪೆಟ್ರೋಲ್ ಬಂಕ್‌ನ ಇತರ ಭಾಗಗಳಿಗೆ ವ್ಯಾಪಿಸುವುದನ್ನು ತಡೆಯಲಾಗಿದ್ದು, ಸಂಭವಿಸಬಹುದಾಗಿದ್ದ ದೊಡ್ಡ ಅನಾಹುತ ತಪ್ಪಿದಂತಾಗಿದೆ.

ಈ ಕುರಿತು ಮಾಹಿತಿ ನೀಡಿದ ಅಗ್ನಿಶಾಮಕ ಠಾಣೆಯ ಹಿರಿಯ ಅಧಿಕಾರಿ ರಂಗಪ್ಪ, ಬೆಂಕಿ ಕಾಣಿಸಿಕೊಂಡ ತಕ್ಷಣ ಸಿಬ್ಬಂದಿ ಸ್ಥಳಕ್ಕೆ ತೆರಳಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದಿದ್ದರಿಂದ ಹೆಚ್ಚಿನ ಹಾನಿ ಸಂಭವಿಸಿಲ್ಲ ಎಂದು ತಿಳಿಸಿದ್ದಾರೆ.

ಬೈಕ್‌ಗೆ ಬೆಂಕಿ ಹೊತ್ತಿಕೊಳ್ಳಲು ನಿಖರ ಕಾರಣವೇನು ಎಂಬುದು ತಿಳಿದುಬಂದಿಲ್ಲ. ಘಟನೆಯು ಪೆಟ್ರೋಲ್ ಬಂಕ್‌ಗಳಲ್ಲಿ ಅಗ್ನಿ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಅಗತ್ಯವನ್ನು ಮತ್ತೊಮ್ಮೆ ನೆನಪಿಸಿದೆ.

## ಬೇಸಿಗೆಯವರೆಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ: ಎನ್.ಎಸ್. ಬೋಸರಾಜು

ಮಾನ್ವಿ: ತಾಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಬೇಸಿಗೆಯವರೆಗೆ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಈಗಿನಿಂದಲೇ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಕುಡಿಯುವ ನೀರಿನ ಕೆರೆಗಳು ಹಾಗೂ ಜಲಮೂಲಗಳ ಸಂರಕ್ಷಣೆಗೆ ಅಧಿಕಾರಿಗಳು ಹೆಚ್ಚಿನ ಆದ್ಯತೆ ನೀಡಬೇಕು ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಸೂಚಿಸಿದರು.



ತಾಲೂಕಿನ ಜಾನೇಕಲ್, ಆಲ್ದಾಳ, ಅಮರಾವತಿ, ನಕ್ಕುಂದಿ, ಬಾಗಲವಾಡ, ಲಕ್ಷ್ಮೀ ಕ್ಯಾಂಪ್ ಸೇರಿದಂತೆ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಕುಡಿಯುವ ನೀರಿನ ಲಭ್ಯತೆ, ಕೆರೆಗಳ ಸ್ಥಿತಿಗತಿ ಹಾಗೂ ನೀರು ಪೂರೈಕೆ ವ್ಯವಸ್ಥೆಯನ್ನು ಪರಿಶೀಲಿಸಿದ ಬಳಿಕ ಅವರು ಅಧಿಕಾರಿಗಳೊಂದಿಗೆ ಮಾತನಾಡಿದರು.

ಗ್ರಾಮಗಳಲ್ಲಿರುವ ಸರ್ಕಾರಿ ಕುಡಿಯುವ ನೀರಿನ ಕೆರೆಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಕೆರೆಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡುವ ಜವಾಬ್ದಾರಿಯನ್ನು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ನಿರ್ವಹಿಸಬೇಕು. ಕೆರೆಗಳಿಗೆ ತ್ಯಾಜ್ಯ ಹಾಗೂ ಕೊಳಚೆ ನೀರು ಸೇರದಂತೆ ಎಚ್ಚರಿಕೆ ವಹಿಸುವುದರ ಜೊತೆಗೆ ಜಲಮೂಲಗಳ ಸಂರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಕೆರೆಗಳಲ್ಲಿ ಲಭ್ಯವಿರುವ ನೀರಿನ ಪ್ರಮಾಣ ಮತ್ತು ಸಂಗ್ರಹ ಸಾಮರ್ಥ್ಯವನ್ನು ಪರಿಶೀಲಿಸಬೇಕು. ಅಗತ್ಯವಿರುವ ಕಡೆಗಳಲ್ಲಿ ಹೂಳೆತ್ತುವಿಕೆ, ಸ್ವಚ್ಛತಾ ಕಾರ್ಯ ಹಾಗೂ ಕೆರೆಗಳ ಸುತ್ತ ಬೇಲಿ ಅಳವಡಿಸಲು ಕ್ರಮ ಕೈಗೊಳ್ಳಬೇಕು. ಕೆರೆಗಳ ಒತ್ತುವರಿಯನ್ನು ತಡೆಗಟ್ಟಿ ನೀರಿನ ಸಂಗ್ರಹ 2ನೇ ಪುಟಕ್ಕೆ

## ಕಾಶಿಯಲ್ಲಿ ಶ್ರೀಮಠ ಸ್ಥಾಪನೆಗೆ ಮುಂದಾದ ಸುಬುಧೇಂದ್ರ ತೀರ್ಥ ಶ್ರೀಗಳು: ನಾಲ್ಕು ಸ್ಥಳಗಳ ಪರಿಶೀಲನೆ

ವಾರಾಣಸಿ: ಪವಿತ್ರ ಕ್ಷೇತ್ರ ಅಯೋಧ್ಯೆಯಲ್ಲಿ ಭೂಮಿಪೂಜೆ ನೆರವೇರಿಸಿದ ಬಳಿಕ ಕಾಶಿ ಕ್ಷೇತ್ರಕ್ಕೆ ಭೇಟಿ ನೀಡಿದ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿ ಅವರು ವಾರಾಣಸಿಯಲ್ಲಿ ನೂತನ ಶ್ರೀಮಠ ನಿರ್ಮಾಣಕ್ಕೆ ಉದ್ದೇಶಿಸಿರುವ ವಿವಿಧ ಸ್ಥಳಗಳನ್ನು ಪರಿಶೀಲಿಸಿದರು.



ಧಾರ್ಮಿಕ ಹಾಗೂ ಶೈಕ್ಷಣಿಕ ಸೇವಾ ಚಟುವಟಿಕೆಗಳನ್ನು ವಿಸ್ತರಿಸುವ ಉದ್ದೇಶದಿಂದ ವಾರಾಣಸಿಯಲ್ಲಿ ಶ್ರೀಮಠದ ಕಟ್ಟಡ ನಿರ್ಮಿಸಲು ಯೋಜಿಸಲಾಗಿದ್ದು, ಇದಕ್ಕಾಗಿ ಸ್ವಾಮೀಜಿ ಅವರು ಹಲವು ಸ್ಥಳಗಳನ್ನು ಖುದ್ದಾಗಿ ವೀಕ್ಷಿಸಿದರು. ಪರಿಶೀಲನೆಯ ನಂತರ ನಾಲ್ಕು ಸ್ಥಳಗಳನ್ನು ಪ್ರಾಥಮಿಕವಾಗಿ ಆಯ್ಕೆ ಮಾಡಲಾಗಿದ್ದು, ಮುಂದಿನ ಹಂತದ ಪ್ರಕ್ರಿಯೆಗಳು ಶೀಘ್ರದಲ್ಲೇ ಆರಂಭವಾಗುವ ನಿರೀಕ್ಷೆಯಿದೆ.

ದೇಶದ ಪ್ರಮುಖ ಪುಣ್ಯಕ್ಷೇತ್ರಗಳಲ್ಲಿ ಒಂದಾಗಿರುವ ವಾರಾಣಸಿಗೆ ಪ್ರತಿವರ್ಷ ವಿವಿಧ ಭಾಗಗಳಿಂದ ಭಕ್ತರು ಹಾಗೂ ಶಿಷ್ಯರು ಆಗಮಿಸುತ್ತಾರೆ. ಇವರಿಗೆ ಅನುಕೂಲವಾಗುವಂತೆ ವಸತಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದು ಉದ್ದೇಶಿತ ಶ್ರೀಮಠ ನಿರ್ಮಾಣ ಯೋಜನೆಯ ಪ್ರಮುಖ ಆಶಯವಾಗಿದೆ.

ಅಲ್ಲದೆ, ವಾರಾಣಸಿಯ ವಿವಿಧ ವಿದ್ಯಾಸಂಸ್ಥೆಗಳಲ್ಲಿ ವೇದ ಹಾಗೂ ಶಾಸ್ತ್ರ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಸತಿ ಮತ್ತು ಅಧ್ಯಯನಕ್ಕೆ ಪೂರಕ 2ನೇ ಪುಟಕ್ಕೆ

## ಸಿಸಿಟಿವಿಯಲ್ಲಿ ಆಯುಧ ಹಿಡಿದ ವ್ಯಕ್ತಿಯ ಓಡಾಟ ಸೆರೆ

ರಾಯಚೂರು: ನಗರದ ಆಶಾಪುರ ರಸ್ತೆಯ ಸುತ್ತಮುತ್ತಲಿನ ಬಡಾವಣೆಗಳಲ್ಲಿ ರಾತ್ರಿ ವೇಳೆ ಅನುಮಾನಾಸ್ಪದ ವ್ಯಕ್ತಿಗಳ ಓಡಾಟ ಹಾಗೂ ಕಳ್ಳತನದ ಯತ್ನಗಳು ಹೆಚ್ಚಾಗುತ್ತಿರುವ ಆರೋಪ ಕೇಳಿಬಂದಿದ್ದು, ನಿವಾಸಿಗಳಲ್ಲಿ ಆತಂಕ ಮನೆಮಾಡಿದೆ. ಆಫೀಸರ್ಸ್ ಬಡಾವಣೆಯಲ್ಲಿ ಅಕ್ಟೋಬರ್ 19ರಂದು ವ್ಯಕ್ತಿಯೊಬ್ಬ ಕೈಯಲ್ಲಿ ಲಾಂಗ್‌ನಂತಹ ಆಯುಧ ಹಿಡಿದು ಸಂಚರಿಸುತ್ತಿರುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ದಾಖಲಾಗಿದೆ ಎನ್ನಲಾಗಿದೆ.



ಆಶಾಪುರ ರಸ್ತೆಗೆ ಹೊಂದಿಕೊಂಡಿರುವ ವಿವಿಧ ಬಡಾವಣೆಗಳಲ್ಲಿ ಕಳೆದ ಎರಡು ವಾರಗಳ ಅವಧಿಯಲ್ಲಿ ನಾಲ್ಕು ಕಡೆ ಕಳ್ಳತನಕ್ಕೆ ಯತ್ನಿಸಿರುವ ಬಗ್ಗೆ ಸ್ಥಳೀಯರು ಮಾಹಿತಿ ನೀಡಿದ್ದಾರೆ. ವಿಶೇಷವಾಗಿ ಬೆಳಗಿನ ಜಾವ 2ರಿಂದ 4 ಗಂಟೆಯ ನಡುವೆ ಅನುಮಾನಾಸ್ಪದ ವ್ಯಕ್ತಿಗಳು ಸಂಚರಿಸುತ್ತಿದ್ದು, ಬೀಗ ಹಾಕಿರುವ ಮನೆಗಳು ಹಾಗೂ ಮನೆಗಳ ಹೊರಭಾಗದಲ್ಲಿ ಇರಿಸಲಾಗಿರುವ ವಸ್ತುಗಳನ್ನು ಗುರಿಯಾಗಿಸಿಕೊಳ್ಳುತ್ತಿದ್ದಾರೆ ಎಂದು ನಿವಾಸಿಗಳು ಆರೋಪಿಸಿದ್ದಾರೆ.

ಇದಲ್ಲದೆ, ಎರಡು ಮನೆಗಳ ಹೊರಭಾಗದಲ್ಲಿ 2ನೇ ಪುಟಕ್ಕೆ

## ಆರ್‌ಟಿಪಿಎಸ್, ವೈಟಿಪಿಎಸ್ ಅಭಿವೃದ್ಧಿಗೆ ಕೆಪಿಸಿಎಲ್ ಅಧಿಕಾರಿಗಳೊಂದಿಗೆ ಶಾಸಕ ದದ್ದಲ್ ಸಮಾಲೋಚನೆ

ರಾಯಚೂರು: ಜಿಲ್ಲೆಯ ರಾಯಚೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರ (ಆರ್‌ಟಿಪಿಎಸ್) ಹಾಗೂ ಯರಮರಸ್ ಶಾಖೋತ್ಪನ್ನ ವಿದ್ಯುತ್ ಸ್ಥಾವರ (ವೈಟಿಪಿಎಸ್) ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ನಿವಾರಣೆ ಮತ್ತು ವಿದ್ಯುತ್ ಉತ್ಪಾದನಾ ಸಾಮರ್ಥ್ಯ ವೃದ್ಧಿಗೆ ಸಂಬಂಧಿಸಿದಂತೆ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅವರು ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ (ಕೆಪಿಸಿಎಲ್) ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು.



ಬೆಂಗಳೂರಿನಲ್ಲಿ ಕೆಪಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ರಾಜೇಂದ್ರ ಚೋಳನ್ ಪಿ. ಹಾಗೂ ಹಣಕಾಸು ನಿರ್ದೇಶಕ ನಾಗರಾಜ್ ಅವರನ್ನು ಭೇಟಿಯಾದ ಶಾಸಕರು, ಎರಡೂ ವಿದ್ಯುತ್ ಸ್ಥಾವರಗಳ ಪ್ರಸ್ತುತ ಕಾರ್ಯನಿರ್ವಹಣೆ, ತಾಂತ್ರಿಕ ಸಮಸ್ಯೆಗಳು, ನಿರ್ವಹಣಾ ವ್ಯವಸ್ಥೆ ಹಾಗೂ ಅಭಿವೃದ್ಧಿಗೆ ಅಗತ್ಯವಿರುವ ಯೋಜನೆಗಳ ಕುರಿತು ಚರ್ಚಿಸಿದರು.

ರಾಜ್ಯದ ವಿದ್ಯುತ್ ಬೇಡಿಕೆ ಪೂರೈಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಈ ಸ್ಥಾವರಗಳ ಕಾರ್ಯಕ್ಷಮತೆಯನ್ನು ಮತ್ತಷ್ಟು ಹೆಚ್ಚಿಸುವ ಅಗತ್ಯವಿದೆ. ವಿದ್ಯುತ್ ಉತ್ಪಾದನೆಯಲ್ಲಿ ನಿರಂತರತೆ ಕಾಯ್ದುಕೊಳ್ಳಲು ತಾಂತ್ರಿಕ ಅಡಚಣೆಗಳನ್ನು ನಿವಾರಿಸುವುದರ ಜೊತೆಗೆ ಅಗತ್ಯ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಶಾಸಕರು ಅಧಿಕಾರಿಗಳ ಗಮನಕ್ಕೆ ತಂದರು.

ವಿದ್ಯುತ್ ಸ್ಥಾವರಗಳ ಆಧುನೀಕರಣ, ಉತ್ಪಾದನಾ ಘಟಕಗಳ ಸಮರ್ಪಕ ನಿರ್ವಹಣೆ, ಕಾರ್ಯಾಚರಣೆಯಲ್ಲಿನ ಸಮಸ್ಯೆಗಳಿಗೆ ಪರಿಹಾರ ಹಾಗೂ ಭವಿಷ್ಯದ ವಿದ್ಯುತ್ ಬೇಡಿಕೆಗೆ ಅನುಗುಣವಾಗಿ ಉತ್ಪಾದನಾ ಸಾಮರ್ಥ್ಯ 2ನೇ ಪುಟಕ್ಕೆ

## ಗಾಂಜಾ ದಂಧೆಗೆ ಕಡಿವಾಣ ಹಾಕಲು ವಾರದ ಗಡುವು: ಇಲ್ಲದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ



ರಾಯಚೂರು: ನಗರದಲ್ಲಿ ಹೆಚ್ಚುತ್ತಿರುವ ಗಾಂಜಾ ಹಾಗೂ ಇತರ ಮಾದಕ ವಸ್ತುಗಳ ಅಕ್ರಮ ಮಾರಾಟವನ್ನು ನಿಯಂತ್ರಿಸಲು ಪೊಲೀಸ್ ಇಲಾಖೆ ಒಂದು ವಾರದೊಳಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ನಗರದ ವಿವಿಧ ಯುವ ಸಂಘಟನೆಗಳನ್ನು ಒಗ್ಗೂಡಿಸಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಎಂ. ವಿರುಪಾಕ್ಷಿ ಎಚ್ಚರಿಕೆ ನೀಡಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಯಚೂರು ನಗರದ ಹಲವು ಬಡಾವಣೆಗಳಲ್ಲಿ ಗಾಂಜಾ ಮಾರಾಟ ಅವ್ಯಾಹತವಾಗಿ ನಡೆಯುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಕೇಳಿಬರುತ್ತಿವೆ. ಮಾದಕ ವಸ್ತುಗಳ ಚಟಕ್ಕೆ ಯುವಕರು ಬಲಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ಇದನ್ನು ತಡೆಯುವಲ್ಲಿ ಪೊಲೀಸ್ ಇಲಾಖೆ ಹೆಚ್ಚಿನ ಜವಾಬ್ದಾರಿ ವಹಿಸಬೇಕಾಗಿದೆ ಎಂದು ಹೇಳಿದರು.

ನಗರದಲ್ಲಿ ಇತ್ತೀಚೆಗೆ ಸಂಭವಿಸಿರುವ ಕೊಲೆ ಪ್ರಕರಣಗಳು ಸಾರ್ವಜನಿಕರಲ್ಲಿ ಆತಂಕ ಮೂಡಿಸಿವೆ. ಕುಲಸುಂಬಿ ಕಾಲೋನಿ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ನಡೆದ ಹತ್ಯೆಗಳು ಹಾಗೂ ಏಕ ಮಿನಾರ್ ಸಮೀಪ ಸಂಭವಿಸಿದ ಕೊಲೆ ಪ್ರಕರಣಗಳ ಹಿನ್ನೆಲೆಯನ್ನು 2ನೇ ಪುಟಕ್ಕೆ

## ಯುವ ಕ್ರೀಡಾಪಟುಗಳಿಗೆ ಪ್ರತಿಭೆ ಪ್ರದರ್ಶನಕ್ಕೆ ವೇದಿಕೆ: ಅ.29ರಂದು ನಿಡ್ಜಾಮ್-2026 ಕ್ರೀಡಾಕೂಟ



ರಾಯಚೂರು: ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳ ಯುವ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಜೊತೆಗೆ ಪ್ರತಿಭಾವಂತರನ್ನು ರಾಜ್ಯಮಟ್ಟದ ಸ್ಪರ್ಧೆಗಳಿಗೆ ಸಜ್ಜುಗೊಳಿಸುವ ಉದ್ದೇಶದಿಂದ ಅಕ್ಟೋಬರ್ 29ರಂದು ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ನಿಡ್ಜಾಮ್-2026 (NIDJAM) ಅಥ್ಲೆಟಿಕ್ಸ್ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿದೆ ಎಂದು ರಾಯಚೂರು ಅಥ್ಲೆಟಿಕ್ಸ್ ಅಸೋಸಿಯೇಷನ್ ಉಪಾಧ್ಯಕ್ಷ ಶ್ರೀನಿವಾಸ್ ರೆಡ್ಡಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕ್ರೀಡೆಯಲ್ಲಿ ಆಸಕ್ತಿ ಹೊಂದಿರುವ 14 ಹಾಗೂ 16 ವರ್ಷದೊಳಗಿನ ಬಾಲಕ ಮತ್ತು ಬಾಲಕಿಯರಿಗೆ ಪ್ರತ್ಯೇಕ ವಿಭಾಗಗಳಲ್ಲಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಅತ್ಯುತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ಗುರುತಿಸಿ, ಅಸೋಸಿಯೇಷನ್ ಮೂಲಕ ರಾಜ್ಯಮಟ್ಟದ ಕ್ರೀಡಾಕೂಟಗಳಿಗೆ ಕಳುಹಿಸುವ ವ್ಯವಸ್ಥೆ ಮಾಡಲಾಗುವುದು ಎಂದರು.

14 ವರ್ಷದೊಳಗಿನ ವಯೋಮಾನದ ಕ್ರೀಡಾಪಟುಗಳಿಗೆ ಟ್ರಯಥ್ಲಾನ್ ಮಾದರಿಯಲ್ಲಿ 60 ಮೀಟರ್ ಓಟ, ಉದ್ದಜಿಗಿತ, ಎತ್ತರಜಿಗಿತ, ಬಾಲ್ ಎಸೆತ ಹಾಗೂ 600 ಮೀಟರ್ ಓಟ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಈ ವಿಭಾಗದಲ್ಲಿ ಐದು ಮೀಟರ್ ಓಟದ ಅಂತರದಿಂದ ಕಿಡ್ಸ್ ಜಾವೆಲಿನ್ ಥ್ರೋ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ವಿವರಿಸಿದರು.

ಅದೇ ರೀತಿ 16 ವರ್ಷದೊಳಗಿನ ಬಾಲಕ ಮತ್ತು ಬಾಲಕಿಯರಿಗೆ 60 ಮೀಟರ್ ಓಟ, ಹರ್ಡಲ್ಸ್, 600 ಮೀಟರ್ ಓಟ, ಉದ್ದಜಿಗಿತ, ಎತ್ತರಜಿಗಿತ, ಗುಂಡು ಎಸೆತ ಮತ್ತು ಈಟಿ ಎಸೆತ ಸ್ಪರ್ಧೆಗಳು ನಡೆಯಲಿವೆ. ಇದರೊಂದಿಗೆ ಪೆಂಟಾಥ್ಲಾನ್ ವಿಭಾಗದಲ್ಲಿಯೂ ಕ್ರೀಡಾಪಟುಗಳು ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಸ್ಪರ್ಧೆಯಲ್ಲಿ ಪಾಲ್ಗೊಳ್ಳುವ ಕ್ರೀಡಾಪಟುಗಳಿಗೆ ವಯೋಮಿತಿಯನ್ನು ನಿಗದಿಪಡಿಸಲಾಗಿದ್ದು, 14 ವರ್ಷದೊಳಗಿನ ವಿಭಾಗಕ್ಕೆ 2012ರ ನವೆಂಬರ್ 17ರಿಂದ 2014ರ ನವೆಂಬರ್ 16ರ ನಡುವೆ ಜನಿಸಿದವರು ಅರ್ಹರಾಗಿರುತ್ತಾರೆ. 16 ವರ್ಷದೊಳಗಿನ ವಿಭಾಗದಲ್ಲಿ 2010ರ ನವೆಂಬರ್ 17ರಿಂದ 2012ರ ನವೆಂಬರ್ 16ರ ನಡುವೆ ಜನಿಸಿದವರು ಭಾಗವಹಿಸಬಹುದು. 14 ವರ್ಷದೊಳಗಿನ ವಿಭಾಗದ ಸ್ಪರ್ಧಿಗಳಿಗೆ 2026ರ ನವೆಂಬರ್ 16ರ ವೇಳೆಗೆ ಕನಿಷ್ಠ 12 ವರ್ಷ ಪೂರ್ಣಗೊಂಡಿರಬೇಕು. ಅದಕ್ಕಿಂತ ಕಡಿಮೆ ವಯಸ್ಸಿ 2ನೇ ಪುಟಕ್ಕೆ

## ತಿಡಿಗೋಳದಲ್ಲಿ ದಲಿತರ ಮೇಲಿನ ದೌರ್ಜನ್ಯ ಆರೋಪ: ನ್ಯಾಯಕ್ಕಾಗಿ ನ.8ರಂದು ಬೃಹತ್ ಹೋರಾಟಕ್ಕೆ ನಿರ್ಧಾರ



ರಾಯಚೂರು: ಮಸ್ಕಿ ವಿಧಾನಸಭಾ ಕ್ಷೇತ್ರದ ತಿಡಿಗೋಳ ಮತ್ತು ನಿಡಿಗೋಳ ಗ್ರಾಮಗಳಲ್ಲಿ ದಲಿತ ಸಮುದಾಯದ ಜನರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುವಂತೆ ಒತ್ತಾಯಿಸಿ ನವೆಂಬರ್ 8ರಂದು ತಿಡಿಗೋಳ ಚಲೋ ಹೆಸರಿನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ದಲಿತ ಮುಖಂಡ ಹಾಗೂ ಉಪನ್ಯಾಸಕ ತಾಯಪ್ಪ ತಿಡಿಗೋಳ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಗ್ರಾಮಗಳಲ್ಲಿ ದಲಿತ ಕುಟುಂಬಗಳ ಮೇಲೆ ದೌರ್ಜನ್ಯ ನಡೆಯುತ್ತಿರುವುದಲ್ಲದೆ, ಅಸ್ಪೃಶ್ಯತೆ ಆಚರಣೆ, ನಿವೇಶನಗಳ ಅತಿಕ್ರಮಣ ಹಾಗೂ ಮೂಲಸೌಕರ್ಯಗಳ ಕೊರತೆಯಿಂದ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಆರೋಪಿಸಿದರು.

ಅಕ್ಟೋಬರ್ 18ರಂದು ತಿಡಿಗೋಳ ಗ್ರಾಮದಲ್ಲಿ ನಡೆದ ಮಾರುತೇಶ್ವರ ಜಾತ್ರೆಯ ಸಂದರ್ಭದಲ್ಲಿ ದಲಿತ ಯುವಕರ ಮೇಲೆ ಹಲ್ಲೆ ನಡೆಸಲಾಗಿದೆ. ಈ ವೇಳೆ ಯುವಕರ ರಕ್ಷಣೆಗೆ ಮುಂದಾದ ಮಹಿಳೆಯರು, ವೃದ್ಧರು ಹಾಗೂ ಇತರರ ಮೇಲೆಯೂ ಹಲ್ಲೆ ನಡೆದಿದೆ. ಘಟನೆಯ ನಂತರ ಗ್ರಾಮದಲ್ಲಿ ಆತಂಕದ ಪರಿಸ್ಥಿತಿ ನಿರ್ಮಾಣವಾಗಿದ್ದು, ಕೆಲವು ಕುಟುಂಬಗಳು ಸುರಕ್ಷತೆಯ ಕಾರಣದಿಂದ ಗ್ರಾಮ ತೊರೆಯುವಂತಾಗಿದೆ ಎಂದು 2ನೇ ಪುಟಕ್ಕೆ

## ಶ್ರೀ ಅಂಬಾ ಭವಾನಿ ದೇವಿಗೆ ವಿಶೇಷ ಪೂಜೆ, ಮಹಾಪ್ರಸಾದ ವಿತರಣೆ: ಹಾಲಿ, ಮಾಜಿ ಶಾಸಕರ ಭೇಟಿ

ಸಿರವಾರ, ಅ.27: ಪಟ್ಟಣದ ಮಹಾತ್ಮ ಗಾಂಧಿ ಕಾಲೋನಿಯಲ್ಲಿರುವ ಶ್ರೀ ಅಂಬಾ ಭವಾನಿ ದೇವಸ್ಥಾನದಲ್ಲಿ ದಸರಾ ಮಹೋತ್ಸವದ ಪೂಜಾ ಕಾರ್ಯಕ್ರಮಗಳು ಯಶಸ್ವಿಯಾಗಿ ಸಂಪನ್ನಗೊಂಡ ಹಿನ್ನೆಲೆಯಲ್ಲಿ ಸೋಮವಾರ ಹುಣ್ಣಿಮೆಯ ಅಂಗವಾಗಿ ವಿಶೇಷ ಪೂಜೆ, ಅಭಿಷೇಕ, ಅಲಂಕಾರ ಹಾಗೂ ಮಹಾಪ್ರಸಾದ ವಿತರಣೆ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಹಮ್ಮಿಕೊಳ್ಳಲಾಗಿತ್ತು.



ಸಿರವಾರ ತಾಲೂಕು ಭಾವಸಾರ ಕ್ಷತ್ರಿಯ ಸಮಾಜ ಹಾಗೂ ಶ್ರೀ ಅಂಬಾ ಭವಾನಿ ದೇವಸ್ಥಾನ ಸಮಿತಿ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ದೇವಸ್ಥಾನದ ಅರ್ಚಕ ಪವನ್ ಜೋಶಿ ಅವರ ನೇತೃತ್ವದಲ್ಲಿ ದೇವಿಗೆ ವಿಶೇಷ ಅಭಿಷೇಕ, ಪುಷ್ಪಾಲಂಕಾರ ಹಾಗೂ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು. ದೇವಿಯನ್ನು ವಿಶೇಷವಾಗಿ ಅಲಂಕರಿಸಿ ಮಹಾಮಂಗಳಾರತಿ ಸಲ್ಲಿಸಲಾಯಿತು.

ದಸರಾ ಮಹೋತ್ಸವದ ಸಮಾರೋಪದ ಅಂಗವಾಗಿ ನಡೆದ ಈ ಧಾರ್ಮಿಕ ಕಾರ್ಯಕ್ರಮಕ್ಕೆ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು, ಮಾನ್ವಿ ಶಾಸಕ ಜಿ. ಹಂಪಯ್ಯ ನಾಯಕ, ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಹಾಗೂ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಜ್ಯೋತಿ ಅಕ್ಕನವರು ಭೇಟಿ ನೀಡಿ ಶ್ರೀ ಅಂಬಾ ಭವಾನಿ ದೇವಿಯ ದರ್ಶನ ಪಡೆದು ವಿಶೇಷ ಪೂಜೆಯಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ 2ನೇ ಪುಟಕ್ಕೆ

# ಶ್ರೀ ಜೈ ಸಂತೋಷಿ ಮಾತಾ ದೇವಸ್ಥಾನದ 27ನೇ ವಾರ್ಷಿಕೋತ್ಸವ, ಸಂಭ್ರಮದ ರಥೋತ್ಸವ



ಮಾನ್ವಿ: ಪಟ್ಟಣದ ಶ್ರೀ ಜೈ ಸಂತೋಷಿ ಮಾತಾ ದೇವಸ್ಥಾನದ 27ನೇ ವಾರ್ಷಿಕೋತ್ಸವದ ಅಂಗವಾಗಿ ಆಯೋಜಿಸಿದ್ದ ರಥೋತ್ಸವವು ಭಕ್ತಿಭಾವ ಹಾಗೂ ಸಂಭ್ರಮದಿಂದ ಜರುಗಿತು. ಅಪಾರ ಭಕ್ತರ ಸಮ್ಮುಖದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಭಾಗವಹಿಸಿ ರಥೋತ್ಸವಕ್ಕೆ ಚಾಲನೆ ನೀಡಿದರು.

ದೇವಸ್ಥಾನಕ್ಕೆ ಭೇಟಿ ನೀಡಿದ ಎನ್.ಎಸ್. ಬೋಸರಾಜು ಅವರು ಶ್ರೀ ಜೈ ಸಂತೋಷಿ ಮಾತೆಗೆ ವಿಶೇಷ ಪೂಜೆ ಸಲ್ಲಿಸಿ, ನಾಡಿನ ಜನತೆಯ ಸುಖ, ಶಾಂತಿ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು. ಬಳಿಕ ದೇವಸ್ಥಾನದ ಆವರಣದಲ್ಲಿ ಅಲಂಕೃತ ರಥವನ್ನು ಎಳೆಯುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಧಾರ್ಮಿಕ ಆಚರಣೆಗಳು ಸಮಾಜದಲ್ಲಿ ಭಕ್ತಿ, ಶ್ರದ್ಧೆ, ಸಾಮರಸ್ಯ ಹಾಗೂ ಒಗ್ಗಟ್ಟಿನ ಭಾವನೆಗಳನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಶ್ರೀ ಜೈ ಸಂತೋಷಿ ಮಾತೆಯ ಆಶೀರ್ವಾದ ಎಲ್ಲರ ಮೇಲಿರಲಿ. ಪ್ರತಿಯೊಬ್ಬರ ಬದುಕಿನಲ್ಲಿ ಸುಖ, ಶಾಂತಿ, ನೆಮ್ಮದಿ ಹಾಗೂ ಸಮೃದ್ಧಿ ನೆಲೆಸಲಿ ಎಂದು ಹಾರೈಸಿದರು.

ದೇವಸ್ಥಾನದ 27ನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ವಿಶೇಷ ಪೂಜೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ರಥೋತ್ಸವದಲ್ಲಿ ಭಕ್ತರು ಶ್ರದ್ಧಾಭಕ್ತಿಯಿಂದ ಪಾಲ್ಗೊಂಡು ದೇವಿಯ ದರ್ಶನ ಪಡೆದು ಪುನೀತರಾದರು.

ಕಾರ್ಯಕ್ರಮದ ಅಂಗವಾಗಿ ಶ್ರೀ ಜೈ ಸಂತೋಷಿ ಮಾತಾ ದೇವಸ್ಥಾನ ಸಮಿತಿ ವತಿಯಿಂದ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಮತ್ತು ಶಾಸಕ ಜಿ. ಹಂಪಯ್ಯ ನಾಯಕ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ನಗರೇಶ್ವರ ಆರ್ಯವೈಶ್ಯ ಸಂಘದ ತಾಲೂಕು ಅಧ್ಯಕ್ಷ ಆರ್. ಮುತ್ತುರಾಜ್ ಶೆಟ್ಟಿ, ಮಾಂಚಾಲಿ ವೆಂಕಯ್ಯ ಶೆಟ್ಟಿ, ಬಿ. ಈರಣ್ಣ ಶೆಟ್ಟಿ, ವಕೀಲ ಬಿ.ಕೆ. ಅಮರೇಶಪ್ಪ, ಮಹಾಂತೇಶ ಸ್ವಾಮಿ ರೌಡ್ರು, ಸೈಯದ್ ಖಾಲಿದ್ ಖಾದ್ರಿ, ರಾಜ ಸುಭಾಷ್ ಚಂದ್ರ ನಾಯಕ್, ಡಿ. ರಾಘವೇಂದ್ರ ಶೆಟ್ಟಿ, ಆರ್. ಶಿವಯ್ಯ ಶೆಟ್ಟಿ, ರಾಮಾಂಜನೇಯ ಶೆಟ್ಟಿ, ವಿಜಯ್ ರಾವ್ ಕುಪನೇಶಿ, ಚನ್ನಪ್ಪಗೌಡ ಬೆಟ್ಟದೂರು, ಸತ್ತಾರ್ ಬಂಗ್ಲೆವಾಲೆ, ಶಿವಕುಮಾರ್ ಗೌಡ ಬಾಗಲವಾಡ, ಮುಸ್ತಫಾ, ರಸುಲ್ ಖುರೇಶಿ, ಹಂಪಯ್ಯ ನಾಯಕ್, ಕಾಮೇಶ್, ರಾಘವೇಂದ್ರ ಶೆಟ್ಟಿ ಸೇರಿದಂತೆ ದೇವಸ್ಥಾನ ಸಮಿತಿಯ ಪದಾಧಿಕಾರಿಗಳು, ಗಣ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಸಂಪರ್ಕಿಸಿ
ನಿಮ ವಿಶ್ವಾಸ ಅರ್ಹ ಪತ್ರಿಕೆಯ
ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
98863 85685 tungabimba@gmail.com

ಅಮೃತ ವಾಣಿ
ಜೀವನವೆಂದರೆ ಕೇವಲ ಆದಾಯಕ್ಕೆಂದೆ ಮಾಡುವ ಹೋರಾಟವಲ್ಲ.




# ಯುವ ಕ್ರೀಡಾಪಟುಗಳಿಗೆ ಪ್ರತಿಭೆ ಪ್ರದರ್ಶನಕ್ಕೆ ವೇದಿಕೆ: ಅ.29ರಂದು ನಿಡ್ಜಾಮ್-2026 ಕ್ರೀಡಾಕೂಟ

ನವರಿಗೆ ಸ್ಪರ್ಧೆಯಲ್ಲಿ ಅವಕಾಶ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಜಿಲ್ಲೆಯಲ್ಲಿ ಕ್ರೀಡಾ ಪ್ರತಿಭೆಗಳಿಗೆ ಕೊರತೆಯಿಲ್ಲ. ಆದರೆ ಸೂಕ್ತ ವೇದಿಕೆ ಹಾಗೂ ಪ್ರೋತ್ಸಾಹದ ಅಗತ್ಯವಿದೆ. ಈ ಹಿನ್ನೆಲೆಯಲ್ಲಿ ನಿಡ್ಜಾಮ್ ಕ್ರೀಡಾಕೂಟ ಯುವ ಪ್ರತಿಭೆಗಳನ್ನು ಬೆಳಕಿಗೆ ತರುವ ಮಹತ್ವದ ಅವಕಾಶವಾಗಿದೆ. ಕ್ರೀಡಾಪಟುಗಳು ಸ್ಪರ್ಧಾತ್ಮಕ ಮನೋಭಾವದಿಂದ ಪಾಲ್ಗೊಂಡು ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಬೇಕು. ಜಿಲ್ಲೆಯ ಹೆಚ್ಚಿನ ಸಂಖ್ಯೆಯ ಅರ್ಹ ಬಾಲಕ-ಬಾಲಕಿಯರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಶ್ರೀನಿವಾಸ್ ರೆಡ್ಡಿ ಕರೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ತಿಮ್ಮಾರೆಡ್ಡಿ, ಚಂದ್ರಶೇಖರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶ್ರೀ ಅಂಬಾ ಭವಾನಿ ದೇವಿಗೆ ವಿಶೇಷ ಪೂಜೆ, ಮಹಾಪ್ರಸಾದ ವಿತರಣೆ: ಹಾಲಿ, ಮಾಜಿ ಶಾಸಕರ ಭೇಟಿ

ಗಣ್ಯರನ್ನು ದೇವಸ್ಥಾನ ಸಮಿತಿ ಹಾಗೂ ಸಮಾಜದ ಮುಖಂಡರು ಸ್ವಾಗತಿಸಿದರು. ದೇವಸ್ಥಾನದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಆಶೀರ್ವಾದ ಪಡೆದರು. ಬಳಿಕ ಭಕ್ತಾದಿಗಳಿಗೆ ಮಹಾಪ್ರಸಾದ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಚುಕ್ಕಿ ಸೂಗಪ್ಪ ಸಾಹುಕಾರ್, ರಾಜಾ ರಾಮಚಂದ್ರ ನಾಯಕ, ಜಿ. ಲೋಕರೆಡ್ಡಿ, ಎಸ್. ದಾನನಗೌಡ, ಎಂ. ಶ್ರೀನಿವಾಸ, ಪಟ್ಟಣ ಪಂಚಾಯಿತಿ ಅಧ್ಯಕ್ಷ ಹಾಜಿ ಚೌದ್ರಿ, ಮಾಜಿ ಅಧ್ಯಕ್ಷ ವೈ. ಭೂಪನಗೌಡ, ಮಾಜಿ ಉಪಾಧ್ಯಕ್ಷ ಚನ್ನಬಸವ ಗಡ್ಲ, ಪಟ್ಟಣ ಪಂಚಾಯಿತಿ ಸದಸ್ಯರಾದ ಮೌಲಾಸಾಬ್ ವರ್ಚಸ್, ಎಂ. ನಿಂಬೆಯ್ಯ ಸ್ವಾಮಿ, ಶಿವರಾಜಗೌಡ ಬೆಳವಿನೂರು, ಸಿಪಿಐ ಶಶಿಕಾಂತ್ ಎಂ., ಪಿಎಸ್ಐ ಚಂದ್ರಶೇಖರ್ ಹಿರೇಮಠ, ಅಕ್ಕಮಹಾದೇವಿ ನಿಂಬೆಯ್ಯ ಸ್ವಾಮಿ, ಶಿವರಾಜಗೌಡ, ಮಲ್ಲಿಕಾರ್ಜುನ ಪಾಟೀಲ್, ಭೀಮಣ್ಣ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಸಿರವಾರ ತಾಲೂಕು ಭಾವಸಾರ ಕ್ಷತ್ರಿಯ ಸಮಾಜದ ಅಧ್ಯಕ್ಷ ಲಕ್ಷ್ಮೀಕಾಂತ ಮಹೇಂದ್ರಕರ್, ಗೌರವಾಧ್ಯಕ್ಷ ಕಾಶಿನಾಥ ಸರೋದೆ, ಸಮಾಜದ ಮುಖಂಡರಾದ ಮಲ್ಲಿಕಾರ್ಜುನ ಮಹೇಂದ್ರಕರ್, ಬಾಬುರಾವ್ ಹಂಚಾಟೆ, ದೇವಣ್ಣ ಮಹೇಂದ್ರಕರ್, ತುಳಜಾರಾಮ್ ನೀಮ್ಕರ್, ರಾಘವೇಂದ್ರ ಹಂಚಾಟೆ, ಅಂಬಾಜಿರಾವ್ ಸರೋದೆ, ಪರಶುರಾಮ್ ಸರೋದೆ, ವಿಠೋಬರಾವ್, ಚಿದಾನಂದ ಹಂಚಾಟೆ, ಡಾ. ಸುನೀಲ್ ಸರೋದೆ, ವಿಜಯ್ ಸರೋದೆ, ಸಂತೋಷ್ ಸಿಂತ್ರೆ ಸೇರಿದಂತೆ ಸಮಾಜದ ಪದಾಧಿಕಾರಿಗಳು, ಯುವಕರು, ಮಹಿಳೆಯರು ಹಾಗೂ ಮಕ್ಕಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ದಸರಾ ಮಹೋತ್ಸವದ ಅಂಗವಾಗಿ ನಡೆದ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಯಶಸ್ವಿ ಸಮಾಪ್ತಿಗೆ ಕೃತಜ್ಞತೆ ಸಲ್ಲಿಸುವ ಉದ್ದೇಶದಿಂದ ಹಮ್ಮಿಕೊಂಡಿದ್ದ ವಿಶೇಷ ಪೂಜೆ ಹಾಗೂ ಮಹಾಪ್ರಸಾದ ಕಾರ್ಯಕ್ರಮವು ಭಕ್ತರ ಪಾಲ್ಗೊಳ್ಳುವಿಕೆಯೊಂದಿಗೆ ಸಂಪನ್ನಗೊಂಡಿತು.

# ತಿಡಿಗೋಳದಲ್ಲಿ ದಲಿತರ ಮೇಲಿನ ದೌರ್ಜನ್ಯ ಆರೋಪ: ನ್ಯಾಯಕ್ಕಾಗಿ ನ.8ರಂದು ಬೃಹತ್ ಹೋರಾಟಕ್ಕೆ ನಿರ್ಧಾರ

ದೂರಿದರು.

ಹಲ್ಲೆ ಪ್ರಕರಣದ ಹಿನ್ನೆಲೆಯಲ್ಲಿ ದಲಿತ ಯುವಕರ ವಿರುದ್ಧ 21 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ತಿಳಿಸಿದ ಅವರು, ಈ ಪ್ರಕರಣಗಳನ್ನು ಹಿಂಪಡೆಯಬೇಕು. ಘಟನೆಗೆ ಸಂಬಂಧಿಸಿದಂತೆ ನಿಷ್ಪಕ್ಷಪಾತ ತನಿಖೆ ನಡೆಸಿ ನೈಜ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಸಂತ್ರಸ್ತ ಕುಟುಂಬಗಳಿಗೆ ಪೊಲೀಸ್ ಭದ್ರತೆ ಒದಗಿಸುವ ಮೂಲಕ ಅವರು ನಿರ್ಭಯವಾಗಿ ತಮ್ಮ ಮನೆಗಳಿಗೆ ಮರಳಲು ಅನುಕೂಲ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ತಿಡಿಗೋಳ ಹಾಗೂ ನಿಡಿಗೋಳ ಗ್ರಾಮಗಳಲ್ಲಿ ದಲಿತರಿಗೆ ಸಾಮಾಜಿಕ ಸಮಾನತೆ ಇನ್ನೂ ಮರೀಚಿಕೆಯಾಗಿದೆ. ದೇವಸ್ಥಾನಗಳು, ಹೋಟೆಲ್‌ಗಳು ಸೇರಿದಂತೆ ಕೆಲವು ಸಾರ್ವಜನಿಕ ಸ್ಥಳಗಳಲ್ಲಿ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗುತ್ತಿದೆ ಎಂಬ ದೂರುಗಳಿವೆ. ಇಂತಹ ಅಸ್ಪೃಶ್ಯತೆ ಆಚರಣೆಗಳ ಕುರಿತು ಸಂಬಂಧಪಟ್ಟ ಅಧಿಕಾರಿಗಳು ತನಿಖೆ ನಡೆಸಿ ಕಾನೂನುಬದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಇದಲ್ಲದೆ, ದಲಿತ ಸಮುದಾಯಕ್ಕೆ ಸೇರಿದ 17 ಕುಟುಂಬಗಳ ನಿವೇಶನಗಳನ್ನು ಅತಿಕ್ರಮಣ ಮಾಡಲಾಗಿದೆ ಎಂಬ ಆರೋಪವಿದ್ದು, ಸರ್ಕಾರಿ ಭೂಮಿ ಒತ್ತುವರಿ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು. ನಿವೇಶನರಹಿತ ಕುಟುಂಬಗಳಿಗೆ ಆಶ್ರಯ ಯೋಜನೆಯಡಿ ನಿವೇಶನಗಳನ್ನು ಮಂಜೂರು ಮಾಡಬೇಕು. ಮಹಿಳೆಯರಿಗೆ ಶೌಚಾಲಯ ಸೌಲಭ್ಯ, ಶುದ್ಧ ಕುಡಿಯುವ ನೀರು, ಸಮರ್ಪಕ ಚರಂಡಿ ವ್ಯವಸ್ಥೆ, ರಸ್ತೆ ಹಾಗೂ ಬೀದಿದೀಪಗಳ ವ್ಯವಸ್ಥೆ ಕಲ್ಪಿಸುವ ಮೂಲಕ ಗ್ರಾಮಗಳ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಆಗ್ರಹಿಸಿದರು.

ಗ್ರಾಮೀಣ ಭಾಗದ ಬಡ ಕುಟುಂಬಗಳಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ಸಮರ್ಪಕ ಕೆಲಸ ದೊರೆಯುತ್ತಿಲ್ಲ. ಜೀವನೋಪಾಯದ ಸಮಸ್ಯೆ ಎದುರಿಸುತ್ತಿರುವ ಕುಟುಂಬಗಳಿಗೆ ಉದ್ಯೋಗಾವಕಾಶ ಕಲ್ಪಿಸುವುದರ ಜೊತೆಗೆ ಸಂತ್ರಸ್ತರಿಗೆ ಅಗತ್ಯ ಆಹಾರ ಧಾನ್ಯಗಳನ್ನು ಒದಗಿಸಬೇಕು. ಜಿಲ್ಲಾಡಳಿತ ಕೇವಲ ತಾತ್ಕಾಲಿಕ ಕ್ರಮಗಳಿಗೆ ಸೀಮಿತವಾಗದೆ ಗ್ರಾಮಗಳಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಾಮಾಜಿಕ ನ್ಯಾಯ ಸ್ಥಾಪನೆಗೆ ಮುಂದಾಗಬೇಕು ಎಂದು ಹೇಳಿದರು.

ಅಕ್ಟೋಬರ್ 30ರಂದು ಸಿಂಧನೂರಿಗೆ ಆಗಮಿಸಲಿರುವ ಡಿ.ಕೆ. ಶಿವಕುಮಾರ್ ಅವರಿಗೆ ಗ್ರಾಮಗಳಲ್ಲಿನ ಸಮಸ್ಯೆಗಳು ಹಾಗೂ ದಲಿತ ಕುಟುಂಬಗಳ ಬೇಡಿಕೆಗಳ ಕುರಿತು ಮನವಿ ಸಲ್ಲಿಸಲಾಗುವುದು. ಸರ್ಕಾರ ಮತ್ತು ಜಿಲ್ಲಾಡಳಿತದಿಂದ ಸೂಕ್ತ ಸ್ಪಂದನೆ ದೊರೆಯದಿದ್ದಲ್ಲಿ ನವೆಂಬರ್ 8ರಂದು ತಿಡಿಗೋಳ ಚಲೋ ಹೋರಾಟ ನಡೆಸಿ ನ್ಯಾಯಕ್ಕಾಗಿ ಒತ್ತಾಯಿಸಲಾಗುವುದು ಎಂದು ತಾಯಪ್ಪ ತಿಡಿಗೋಳ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಎಸ್. ಮಾರೆಪ್ಪ, ರವೀಂದ್ರನಾಥ್ ಪಟ್ಟಿ, ಎಂ.ಆರ್. ಭೇರಿ, ಹೇಮರಾಜ್ ಆಸ್ಕಿಹಾಳ್, ರಾಜು ಬೊಮ್ಮನಹಾಳ, ನರಸಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಆರ್‌ಟಿಪಿಎಸ್, ವೈಟಿಪಿಎಸ್ ಅಭಿವೃದ್ಧಿಗೆ ಕೆಪಿಸಿಎಲ್ ಅಧಿಕಾರಿಗಳೊಂದಿಗೆ ಶಾಸಕ ದದ್ದಲ್ ಸಮಾಲೋಚನೆ

ಬಲಪಡಿಸುವ ಕುರಿತು ಸಭೆಯಲ್ಲಿ ವಿಚಾರ ವಿನಿಮಯ ನಡೆಯಿತು.

ರಾಯಚೂರು ಮತ್ತು ಯರಮರಸ್ ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳು ರಾಜ್ಯದ ಇಂಧನ ಕ್ಷೇತ್ರದಲ್ಲಿ ಮಹತ್ವದ ಸ್ಥಾನ ಹೊಂದಿವೆ. ಈ ಘಟಕಗಳ ಸಮರ್ಪಕ ಕಾರ್ಯನಿರ್ವಹಣೆಯಿಂದ ಕೈಗಾರಿಕೆಗಳು, ಕೃಷಿ ಚಟುವಟಿಕೆಗಳು ಹಾಗೂ ಸಾರ್ವಜನಿಕರ ವಿದ್ಯುತ್ ಅಗತ್ಯಗಳನ್ನು ಪೂರೈಸಲು ಅನುಕೂಲವಾಗಲಿದೆ. ಆದ್ದರಿಂದ ಸ್ಥಾವರಗಳ ಅಭಿವೃದ್ಧಿಗೆ ಆದ್ಯತೆ ನೀಡುವಂತೆ ಶಾಸಕ ಬಸನಗೌಡ ದದ್ದಲ್ ಮನವಿ ಮಾಡಿದರು.

ಸ್ಥಾವರಗಳಲ್ಲಿ ಎದುರಾಗುತ್ತಿರುವ ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹರಿಸಿ, ವಿದ್ಯುತ್ ಉತ್ಪಾದನೆಯ ದಕ್ಷತೆ ಹೆಚ್ಚಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಲಾಯಿತು.

ಈ ಕುರಿತು ಮಾತನಾಡಿದ ಶಾಸಕ ಬಸನಗೌಡ ದದ್ದಲ್, ರಾಜ್ಯದ ಇಂಧನ ಭದ್ರತೆಯಲ್ಲಿ ರಾಯಚೂರು ಜಿಲ್ಲೆಯ ಎರಡೂ ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳ ಪಾತ್ರ ಮಹತ್ವದ್ದಾಗಿದೆ. ಅವುಗಳ ಕಾರ್ಯಕ್ಷಮತೆ ಹೆಚ್ಚಿಸುವುದು, ಮೂಲಸೌಕರ್ಯ ಬಲಪಡಿಸುವುದು ಹಾಗೂ ಸಮಗ್ರ ಅಭಿವೃದ್ಧಿಗೆ ಪೂರಕವಾದ ಕ್ರಮಗಳನ್ನು ಕೈಗೊಳ್ಳಲು ನಿರಂತರ ಪ್ರಯತ್ನ ನಡೆಸಲಾಗುವುದು ಎಂದು ತಿಳಿಸಿದರು.

# ಸಿಸಿಟಿವಿಯಲ್ಲಿ ಆಯುಧ ಹಿಡಿದ ವ್ಯಕ್ತಿಯ ಓಡಾಟ ಸೆರೆ

ಗ್ಯಾಸ್ ಸಂಪರ್ಕಕ್ಕೆ ಅಳವಡಿಸಲಾಗಿದ್ದ ಸಿಲಿಂಡರ್‌ಗಳನ್ನು ಕಳ್ಳರು ಕದ್ದೊಯ್ದಿರುವುದಾಗಿ ಸ್ಥಳೀಯರು ತಿಳಿಸಿದ್ದಾರೆ. ಸರಣಿ ಕಳ್ಳತನದ ಯತ್ನಗಳು ಹಾಗೂ ರಾತ್ರಿ ವೇಳೆ ಅಪರಿಚಿತರ ಓಡಾಟದಿಂದ ಬಡಾವಣೆಯ ನಿವಾಸಿಗಳು ತಮ್ಮ ಮನೆಗಳ ಸುರಕ್ಷತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.

ಅಕ್ಟೋಬರ್ 19ರಂದು ದಾಖಲಾಗಿದೆ ಎನ್ನಲಾದ ಸಿಸಿಟಿವಿ ದೃಶ್ಯದಲ್ಲಿ ವ್ಯಕ್ತಿಯೊಬ್ಬ ಉದ್ದನೆಯ ಆಯುಧದೊಂದಿಗೆ ಸಂಚರಿಸುತ್ತಿರುವುದು ಸ್ಥಳೀಯರ ಆತಂಕವನ್ನು ಮತ್ತಷ್ಟು ಹೆಚ್ಚಿಸಿದೆ. ಈ ವ್ಯಕ್ತಿಯ ಗುರುತು ಹಾಗೂ ಆತನ ಓಡಾಟದ ಉದ್ದೇಶವನ್ನು ಪತ್ತೆಹಚ್ಚುವಂತೆ ನಿವಾಸಿಗಳು ಪೊಲೀಸ್ ಇಲಾಖೆಯನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಈಗಾಗಲೇ ಪೊಲೀಸರ ಗಮನಕ್ಕೆ ತರಲಾಗಿದ್ದು, ರಾತ್ರಿ ಗಸ್ತು ಹೆಚ್ಚಿಸುವಂತೆ ಮನವಿ ಮಾಡಲಾಗಿದೆ. ನಿವಾಸಿಗಳ ಮನವಿಗೆ ಸ್ಪಂದಿಸಿ ಪೊಲೀಸರು ಗಸ್ತು ಚಟುವಟಿಕೆಯನ್ನು ಹೆಚ್ಚಿಸಿದ್ದಾರೆ ಎಂದು ತಿಳಿದುಬಂದಿದೆ. ಆದರೂ ಕಳ್ಳತನದ ಯತ್ನಗಳು ಮರುಕಳಿಸದಂತೆ ಹೆಚ್ಚಿನ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂಬ ಆಗ್ರಹ ಕೇಳಿಬಂದಿದೆ.

ಬಡಾವಣೆಗಳ ಪ್ರಮುಖ ರಸ್ತೆಗಳಲ್ಲಿ ಪೊಲೀಸ್ ನಿಗಾ ಬಿಗಿಗೊಳಿಸುವುದರ ಜೊತೆಗೆ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ ಅನುಮಾನಾಸ್ಪದ ವ್ಯಕ್ತಿಗಳನ್ನು ಗುರುತಿಸಬೇಕು. ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿರುವವರನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳುವ ಮೂಲಕ ಸಾರ್ವಜನಿಕರ ಆತಂಕ ದೂರ ಮಾಡಬೇಕು ಎಂದು ಸ್ಥಳೀಯ ನಿವಾಸಿಗಳು ಆಗ್ರಹಿಸಿದ್ದಾರೆ.

## ಮೊದಲನೇ ಪುಟದಿಂದ

# ಕಮಲ ಅರಳಿಸಿದ ಶಶೀಲ್ ನಮೋಶಿ: 3,297 ಮತಗಳ ಅಂತರದಿಂದ ಗೆಲುವು

ಅಭ್ಯರ್ಥಿ ಶಶೀಲ್ ಜಿ. ನಮೋಶಿ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ ನಡುವೆ ನೇರ ಪೈಪೋಟಿ ಏರ್ಪಟ್ಟಿತ್ತು. ಉಳಿದ ಅಭ್ಯರ್ಥಿಗಳು ಅತ್ಯಲ್ಪ ಮತಗಳನ್ನು ಪಡೆದರು.

ಆಮ್ ಆದ್ಮಿ ಪಕ್ಷದ ಅಭ್ಯರ್ಥಿ ಸಾಯಬಣ್ಣ ಜಮಾದಾರ 40 ಮತಗಳು ಹಾಗೂ ಜನತಾ ದಳ (ಸಂಯುಕ್ತ) ಪಕ್ಷದ ಅಭ್ಯರ್ಥಿ ಶಂಕರೆಡ್ಡಿ ಪಾಟೀಲ 44 ಮತಗಳನ್ನು ಪಡೆದರು.

ಪಕ್ಷೇತರ ಅಭ್ಯರ್ಥಿಗಳ ಪೈಕಿ ರಾಜಕುಮಾರ ಕೆ. ಕಲಬುರಗಿ 167 ಮತಗಳು, ರಾಜು ದೇವಪ್ಪ ಸೊನ್ನ 127 ಮತಗಳು, ಕವಿರಾಜ ನಾಗಣ್ಣ ಮೋತಕಪಲ್ಲಿ 49 ಮತಗಳು, ಶರಣು ಪಿ. ಸುಗೂರು 13 ಮತಗಳು, ಡಾ. ಸುರೇಶ ದಾವೀದಪ್ಪ 13 ಮತಗಳು, ಶಿವಶಂಕರ ಅಣ್ಣಪ್ಪ ತರನಳ್ಳಿ 12 ಮತಗಳು, ಮಹಬೂಬ್ ಮೊಹಮ್ಮದ ಖಾಜಾ ಹುಸೇನ್ ವಂಟೇಲಿ 10 ಮತಗಳು, ಟಿ.ಕೆ. ದಾಸರ 6 ಮತಗಳು ಹಾಗೂ ಶಶಿಧರ ಬಸವರಾಜ 4 ಮತಗಳನ್ನು ಪಡೆದಿದ್ದಾರೆ.

ಚುನಾವಣಾ ವೀಕ್ಷಕ ಶಿವಕುಮಾರ ಕೆ.ಬಿ. ಅವರ ಸಮ್ಮುಖದಲ್ಲಿ ಮಂಗಳವಾರ ಬೆಳಿಗ್ಗೆ 8 ಗಂಟೆಗೆ ಮತ ಎಣಿಕೆ ಆರಂಭವಾಯಿತು. ಚುನಾವಣಾ ಸಿಬ್ಬಂದಿ ಹಾಗೂ ಅಧಿಕಾರಿಗಳು ನಿಗದಿತ ನಿಯಮಗಳ ಪ್ರಕಾರ ಮತಪತ್ರಗಳ ಪರಿಶೀಲನೆ ಮತ್ತು ಎಣಿಕೆ ಕಾರ್ಯ ನಡೆಸಿದರು. ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಮತ ಎಣಿಕೆ ಕೇಂದ್ರದ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.

ಚುನಾವಣಾ ಪ್ರಕ್ರಿಯೆಯನ್ನು ಮುಕ್ತ, ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿ ನಡೆಸಲು ಸಹಕರಿಸಿದ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಚುನಾವಣಾ ಅಧಿಕಾರಿಗಳು, ಮತಗಟ್ಟೆ ಸಿಬ್ಬಂದಿ, ಮತ ಎಣಿಕೆ ಸಿಬ್ಬಂದಿ, ಪೊಲೀಸ್ ಇಲಾಖೆ, ರಾಜಕೀಯ ಪಕ್ಷಗಳ ಮುಖಂಡರು, ಅಭ್ಯರ್ಥಿಗಳು ಹಾಗೂ ಶಿಕ್ಷಕ ಮತದಾರರಿಗೆ ಚುನಾವಣಾಧಿಕಾರಿ ಜಹೀರಾ ನಸೀಮ್ ಕೃತಜ್ಞತೆ ಸಲ್ಲಿಸಿದರು.

ಮತ ಎಣಿಕೆ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾಧಿಕಾರಿ ಇಕ್ರಂ ಶರೀಫ್, ಯಾದಗಿರಿ ಜಿಲ್ಲಾಧಿಕಾರಿ ರಾಹುಲ್ ಪಾಂಡ್ವೆ, ಬೀದರ್ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ರಾಯಚೂರು ಜಿಲ್ಲಾಧಿಕಾರಿ ಪೂವಿತಾ ಎಸ್., ಬಳ್ಳಾರಿ ಜಿಲ್ಲಾಧಿಕಾರಿ ಡಾ. ಕೆ. ನಾಗೇಂದ್ರ ಪ್ರಸಾದ, ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಸಂಕನೂರ ಸೇರಿದಂತೆ ವಿವಿಧ ಜಿಲ್ಲೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಮತ್ತೊಮ್ಮೆ ಗೆಲುವು ಸಾಧಿಸಿರುವ ಶಶೀಲ್ ಜಿ. ನಮೋಶಿ ಅವರು ವಿಧಾನ ಪರಿಷತ್ತಿನಲ್ಲಿ ತಮ್ಮ ಪ್ರಾತಿನಿಧ್ಯವನ್ನು ಮುಂದುವರಿಸಲಿದ್ದು, ಚುನಾವಣಾ ಫಲಿತಾಂಶ ಪ್ರಕಟವಾಗುತ್ತಿದ್ದಂತೆಯೇ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಕೂಟದ ಕಾರ್ಯಕರ್ತರು ವಿವಿಧೆಡೆ ಸಂಭ್ರಮಾಚರಣೆ ನಡೆಸಿದರು.

# ಬೇಸಿಗೆಯವರೆಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ: ಎನ್.ಎಸ್. ಬೋಸರಾಜು

ಸಾಮರ್ಥ್ಯ ಹೆಚ್ಚಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಗಳು ಕಾರ್ಯಪ್ರವೃತ್ತವಾಗಬೇಕು ಎಂದು ಸೂಚಿಸಿದರು.

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆಯಿರುವ ಗ್ರಾಮಗಳನ್ನು ಮುಂಚಿತವಾಗಿಯೇ ಗುರುತಿಸಬೇಕು. ಅಂತಹ ಗ್ರಾಮಗಳಲ್ಲಿ ನೀರಿನ ಲಭ್ಯತೆಯನ್ನು ಪರಿಶೀಲಿಸಿ, ಅಗತ್ಯವಿರುವ ಕಡೆಗಳಲ್ಲಿ ಪರ್ಯಾಯ ಜಲಮೂಲಗಳನ್ನು ಗುರುತಿಸಿಕೊಳ್ಳಬೇಕು. ಕೊಳವೆಬಾವಿಗಳು, ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ ಹಾಗೂ ಪೈಪ್‌ಲೈನ್‌ಗಳ ಸ್ಥಿತಿಗತಿಗಳನ್ನು ಪರಿಶೀಲಿಸಿ, ದುರಸ್ತಿಗೆ ಅಗತ್ಯವಿರುವ ಕಡೆಗಳಲ್ಲಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಕುಡಿಯುವ ನೀರಿನ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ವಹಿಸದೆ, ಗ್ರಾಮಸ್ಥರಿಗೆ ಯಾವುದೇ ತೊಂದರೆಯಾಗದಂತೆ ನಿರಂತರ ನೀರು ಪೂರೈಕೆಗೆ ಆದ್ಯತೆ ನೀಡಬೇಕು. ಬೇಸಿಗೆಯವರೆಗೆ ನೀರಿನ ಲಭ್ಯತೆ ಖಚಿತಪಡಿಸಿಕೊಳ್ಳಲು ಅಧಿಕಾರಿಗಳು ಸಮರ್ಪಕ ಯೋಜನೆ ರೂಪಿಸಬೇಕು ಎಂದು ಬೋಸರಾಜು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಶಾಸಕ ಹಂಪಯ್ಯ ನಾಯಕ ಮಾತನಾಡಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕೆರೆಗಳ ನಿರ್ವಹಣೆ ಹಾಗೂ ಸ್ವಚ್ಛತೆಗೆ ವಿಶೇಷ ಗಮನ ಹರಿಸಬೇಕು. ನೀರಿನ ಮಹತ್ವ ಮತ್ತು ಮಿತಬಳಕೆಯ ಕುರಿತು ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಬೇಕು. ಬೇಸಿಗೆಯಲ್ಲಿ ಕುಡಿಯುವ ನೀರಿನ ಕೊರತೆ ಎದುರಾಗದಂತೆ ಸಂಬಂಧಪಟ್ಟ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಕೈಗೊಂಡ ಕ್ರಮಗಳ ಕುರಿತು ಅಧಿಕಾರಿಗಳು ನಿಯಮಿತವಾಗಿ ಪರಿಶೀಲನೆ ನಡೆಸಬೇಕು. ಗ್ರಾಮೀಣ ಪ್ರದೇಶಗಳ ಜನರಿಗೆ ಸಮರ್ಪಕವಾಗಿ ನೀರು ದೊರೆಯುವಂತೆ ಅಗತ್ಯ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಖಾಲೀದ್ ಅಹಮ್ಮದ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿ ಸುರೇಶ, ನಯೋಪ್ರ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಶರಣಯ್ಯ ನಾಯಕ, ಬಾಲಸ್ವಾಮಿ ಕೊಡ್ಲಿ, ರಾಜಾ ಸುಭಾಷ್ ಚಂದ್ರ ನಾಯಕ, ಮಹಾಂತೇಶ ಸ್ವಾಮಿ ರೌಡೂರು, ಖಾಲಿದ್ ಗುರು, ತಿಪ್ಪಣ್ಣ ಬಾಗಲವಾಡ, ಪ್ರಸಾದ್ ರಾವ್, ರಾಜಶೇಖರಗೌಡ, ನೀಲಪ್ಪಗೌಡ ಜಾನೇಕಲ್, ಆಲ್ದಾಳ ವೀರಭದ್ರಪ್ಪ, ರಾಮಕೃಷ್ಣ, ನಕ್ಕುಂದಿ ಶಂಕ್ರಪ್ಪ, ವೀರೇಶ, ಆಂಜನೇಯ್ಯ, ಗಣೇಶ ರಾವ್, ಮಲ್ಲಿಕಾರ್ಜುನ ಸ್ವಾಮಿ, ಸತ್ತಾರ್ ಬಂಗ್ಲೆವಾಲೆ, ಬೀರಪ್ಪ ಬಲ್ಲಟಗಿ ಸೇರಿದಂತೆ ವಿವಿಧ ಗ್ರಾಮಗಳ ಮುಖಂಡರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಶಿಯಲ್ಲಿ ಶ್ರೀಮಠ ಸ್ಥಾಪನೆಗೆ ಮುಂದಾದ ಸುಬುಧೇಂದ್ರ ತೀರ್ಥ ಶ್ರೀಗಳು: ನಾಲ್ಕು ಸ್ಥಳಗಳ ಪರಿಶೀಲನೆ

ಸೌಲಭ್ಯಗಳನ್ನು ಕಲ್ಪಿಸಲು ಉದ್ದೇಶಿಸಲಾಗಿದೆ. ಈ ಮೂಲಕ ಸಾಂಪ್ರದಾಯಿಕ ವೇದ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವುದರ ಜೊತೆಗೆ ಧಾರ್ಮಿಕ ಪರಂಪರೆಯ ಸಂರಕ್ಷಣೆಗೂ ಆದ್ಯತೆ ನೀಡಲಾಗುತ್ತಿದೆ.

ಸ್ಥಳ ಪರಿಶೀಲನೆ ಪೂರ್ಣಗೊಳಿಸಿದ ಬಳಿಕ ಶ್ರೀ ಸುಬುಧೇಂದ್ರ ತೀರ್ಥ ಸ್ವಾಮೀಜಿ ಅವರು ವಾರಾಣಸಿಯ ಪ್ರಸಿದ್ಧ ತುಳಸಿ ಘಾಟ್‌ಗೆ ತೆರಳಿ ಪವಿತ್ರ ಗಂಗಾ ನದಿಯಲ್ಲಿ ಪುಣ್ಯಸ್ನಾನ ಮಾಡಿದರು. ನಂತರ ಶ್ರೀ ಮೂಲರಾಮದೇವರಿಗೆ ಸಮರ್ಪಿಸಿದ ಗಂಧ ಹಾಗೂ ಪುಷ್ಪಗಳನ್ನು ಗಂಗಾ ನದಿಗೆ ಅರ್ಪಿಸಿ ವಿಶೇಷ ಪೂಜಾ ಕೈಂಕರ್ಯ ನೆರವೇರಿಸಿದರು.

ಬಳಿಕ ಗಂಗಾ ನದಿಗೆ ದೀಪಾರಾಧನೆ ಸಲ್ಲಿಸಿದ ಶ್ರೀಗಳು, ಭಕ್ತರು ಹಾಗೂ ಶಿಷ್ಯವೃಂದದ ಸುಖಶಾಂತಿ, ಆರೋಗ್ಯ ಮತ್ತು ಸಮೃದ್ಧಿಗಾಗಿ ಪ್ರಾರ್ಥಿಸಿದರು.

ಅಯೋಧ್ಯೆಯ ನಂತರ ವಾರಾಣಸಿಯಲ್ಲಿಯೂ ಶ್ರೀಮಠದ ನಿರ್ಮಾಣಕ್ಕೆ ಮುಂದಾಗಿರುವುದು ಭಕ್ತರಿಗೆ ಧಾರ್ಮಿಕ ಸೇವೆಗಳನ್ನು ತಲುಪಿಸುವುದರ ಜೊತೆಗೆ ವೇದ ಮತ್ತು ಶಾಸ್ತ್ರ ಶಿಕ್ಷಣಕ್ಕೆ ಅಗತ್ಯ ಸೌಲಭ್ಯಗಳನ್ನು ವಿಸ್ತರಿಸುವ ಮಹತ್ವದ ಪ್ರಯತ್ನವಾಗಿದೆ.

# ಗಾಂಜಾ ದಂಧೆಗೆ ಕಡಿವಾಣ ಹಾಕಲು ವಾರದ ಗಡುವು: ಇಲ್ಲದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

ಪೊಲೀಸರು ಸಮಗ್ರವಾಗಿ ತನಿಖೆ ನಡೆಸಬೇಕು. ಈ ಅಪರಾಧಗಳಿಗೂ ಮಾದಕ ವಸ್ತುಗಳ ಸೇವನೆ ಅಥವಾ ಅಕ್ರಮ ವ್ಯವಹಾರಕ್ಕೂ ಸಂಬಂಧವಿದೆಯೇ ಎಂಬುದನ್ನು ಪರಿಶೀಲಿಸಿ ವಾಸ್ತವಾಂಶವನ್ನು ಸಾರ್ವಜನಿಕರಿಗೆ ತಿಳಿಸಬೇಕು ಎಂದು ಒತ್ತಾಯಿಸಿದರು.

ಕೆಲವು ಪ್ರದೇಶಗಳಲ್ಲಿ ಗಾಂಜಾ ಮಾರಾಟದಲ್ಲಿ ತೊಡಗಿರುವ ಆರೋಪ ಎದುರಿಸುತ್ತಿರುವ ವ್ಯಕ್ತಿಗಳು ರಾಜಕೀಯ ನಾಯಕರ ಹಾಗೂ ಜನಪ್ರತಿನಿಧಿಗಳ ಭಾವಚಿತ್ರಗಳಿರುವ ಫ್ಲೆಕ್ಸ್‌ಗಳನ್ನು ಬಳಸಿಕೊಂಡು ತಮ್ಮ ಪ್ರಭಾವ ಪ್ರದರ್ಶಿಸಲು ಪ್ರಯತ್ನಿಸುತ್ತಿದ್ದಾರೆ ಎಂಬ ಆರೋಪಗಳಿವೆ. ಇಂತಹ ಚಟುವಟಿಕೆಗಳ ಕುರಿತು ಪೊಲೀಸರು ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಮಾದಕ ವಸ್ತುಗಳ ಅಕ್ರಮ ವ್ಯವಹಾರದಲ್ಲಿ ಯಾರೇ ಭಾಗಿಯಾಗಿದ್ದರೂ ಅವರ ರಾಜಕೀಯ ಹಿನ್ನೆಲೆ ಅಥವಾ ಪ್ರಭಾವಕ್ಕೆ ಮಣಿಯದೆ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ನಗರದಲ್ಲಿ ಗಾಂಜಾ ಹಾವಳಿ ಹೆಚ್ಚುತ್ತಿರುವ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಈಗಾಗಲೇ ಚರ್ಚಿಸಲಾಗಿದೆ. ಈ ಸಂಬಂಧ 187 ಪ್ರಕರಣಗಳನ್ನು ದಾಖಲಿಸಲಾಗಿದ್ದು, ಅಕ್ರಮ ಮಾರಾಟದ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ವರಿಷ್ಠಾಧಿಕಾರಿಗಳು ಮಾಹಿತಿ ನೀಡಿದ್ದಾರೆ. ಆದರೆ ಕೇವಲ ಪ್ರಕರಣಗಳನ್ನು ದಾಖಲಿಸುವುದರಿಂದ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯುವುದಿಲ್ಲ ಎಂದು ಅಭಿಪ್ರಾಯಪಟ್ಟರು.

ಗಾಂಜಾ ಎಲ್ಲಿಂದ ನಗರಕ್ಕೆ ಸರಬರಾಜಾಗುತ್ತಿದೆ, ಅದರ ವಿತರಣಾ ಜಾಲದಲ್ಲಿ ಯಾರು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಅಕ್ರಮ ದಂಧೆಯ ಹಿಂದೆ ಇರುವ ವ್ಯಕ್ತಿಗಳು ಯಾರು ಎಂಬುದನ್ನು ಪತ್ತೆಹಚ್ಚಬೇಕು. ಸಣ್ಣಪುಟ್ಟ ಮಾರಾಟಗಾರರ ವಿರುದ್ಧ ಮಾತ್ರ ಕ್ರಮ ಕೈಗೊಳ್ಳದೆ, ಮಾದಕ ವಸ್ತುಗಳನ್ನು ಪೂರೈಸುವ ಪ್ರಮುಖ ಜಾಲವನ್ನು ಬೇಧಿಸುವ ನಿಟ್ಟಿನಲ್ಲಿ ವಿಶೇಷ ಕಾರ್ಯಾಚರಣೆ ನಡೆಸಬೇಕು ಎಂದು ಒತ್ತಾಯಿಸಿದರು.

ನಗರದಲ್ಲಿ ಅಕ್ರಮ ಚಟುವಟಿಕೆಗಳಿಗೆ ಅವಕಾಶ ನೀಡದಂತೆ ಪೊಲೀಸ್ ಇಲಾಖೆ ನಿರಂತರ ನಿಗಾ ವಹಿಸಬೇಕು. ಮಾದಕ ವಸ್ತುಗಳ ಮಾರಾಟದ ಕುರಿತು ಮಾಹಿತಿ ಇದ್ದರೂ ಕ್ರಮ ಕೈಗೊಳ್ಳದ ಅಧಿಕಾರಿಗಳಿದ್ದರೆ ಅವರ ಕಾರ್ಯವೈಖರಿಯನ್ನೂ ಪರಿಶೀಲಿಸಬೇಕು. ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಯಾವುದೇ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಹೇಳಿದರು.

ಯುವಜನತೆ ದುಶ್ಚಟಗಳಿಗೆ ಒಳಗಾಗದಂತೆ ತಡೆಯುವುದು ಕೇವಲ ಪೊಲೀಸ್ ಇಲಾಖೆಯ ಜವಾಬ್ದಾರಿಯಲ್ಲ. ಪೋಷಕರು, ಶಿಕ್ಷಣ ಸಂಸ್ಥೆಗಳು, ಸಾಮಾಜಿಕ ಸಂಘಟನೆಗಳು ಹಾಗೂ ಸಾರ್ವಜನಿಕರು ಕೂಡ ಜಾಗೃತಿ ಮೂಡಿಸುವ ಕಾರ್ಯದಲ್ಲಿ ಕೈಜೋಡಿಸಬೇಕು. ಮಾದಕ ವಸ್ತುಗಳ ಮಾರಾಟದ ಬಗ್ಗೆ ಮಾಹಿತಿ ದೊರೆತಲ್ಲಿ ಪೊಲೀಸರಿಗೆ ತಿಳಿಸುವ ಮೂಲಕ ಸಮಾಜವನ್ನು ಮಾದಕ ವಸ್ತುಗಳ ಹಾವಳಿಯಿಂದ ಮುಕ್ತಗೊಳಿಸಲು ಸಹಕರಿಸಬೇಕು ಎಂದು ಮನವಿ ಮಾಡಿದರು.

ಪೊಲೀಸ್ ಇಲಾಖೆ ಒಂದು ವಾರದೊಳಗೆ ಗಾಂಜಾ ಮಾರಾಟದ ವಿರುದ್ಧ ಪರಿಣಾಮಕಾರಿ ಕಾರ್ಯಾಚರಣೆ ಕೈಗೊಂಡು ಸ್ಪಷ್ಟ ಫಲಿತಾಂಶ ತೋರಿಸಬೇಕು. ಇಲ್ಲದಿದ್ದರೆ ರಾಯಚೂರು ನಗರದ ಎಲ್ಲ ಯುವ ಸಂಘಟನೆಗಳ ಮುಖಂಡರ ಸಭೆ ನಡೆಸಿ ಮುಂದಿನ ಹೋರಾಟದ ಸ್ವರೂಪ ನಿರ್ಧರಿಸಲಾಗುವುದು. ಯುವಕರ ಭವಿಷ್ಯ ರಕ್ಷಣೆ ಹಾಗೂ ನಗರದ ಶಾಂತಿ ಕಾಪಾಡುವ ಉದ್ದೇಶದಿಂದ ಪಕ್ಷಾತೀತವಾಗಿ ಬೃಹತ್ ಹೋರಾಟ ರೂಪಿಸಲಾಗುವುದು ಎಂದು ಎಂ. ವಿರುಪಾಕ್ಷಿ ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಸಣ್ಣ ನರಸಿಂಹಲು, ನರಸಪ್ಪ, ಲಕ್ಷ್ಮೀಪತಿ ಗಣದಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶಿಕ್ಷಕರ ಕ್ಷೇತ್ರಗಳ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಗಳ ಗೆಲುವಿಗೆ ಜೆಡಿಎಸ್ ಮುಖಂಡರಿಂದ ಅಭಿನಂದನೆ



ದೇವದುರ್ಗ: ಕರ್ನಾಟಕ ವಿಧಾನ ಪರಿಷತ್ತಿನ ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿ ಎ.ಪಿ. ರಂಗನಾಥ ಹಾಗೂ ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಶಶೀಲ್ ಜಿ. ನಮೋಶಿ ಅವರು ಗೆಲುವು ಸಾಧಿಸಿರುವ ಹಿನ್ನೆಲೆಯಲ್ಲಿ ದೇವದುರ್ಗ ತಾಲೂಕಿನ ಜೆಡಿಎಸ್ ಮುಖಂಡರು ಹರ್ಷ ವ್ಯಕ್ತಪಡಿಸಿ, ವಿಜೇತ ಅಭ್ಯರ್ಥಿಗಳಿಗೆ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜೆಡಿಎಸ್ ಮುಖಂಡರು, ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಗಳ ಗೆಲುವಿಗೆ ಉಭಯ ಪಕ್ಷಗಳ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರ ಸಂಘಟಿತ ಪರಿಶ್ರಮವೇ ಪ್ರಮುಖ ಕಾರಣವಾಗಿದೆ ಎಂದು ಅಭಿಪ್ರಾಯಪಟ್ಟರು.

ಚುನಾವಣೆಯ ಸಂದರ್ಭದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಪರಸ್ಪರ ಸಹಕಾರದೊಂದಿಗೆ ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದರು. ಮೈತ್ರಿಕೂಟದ ಅಭ್ಯರ್ಥಿಗಳ ಮೇಲೆ ವಿಶ್ವಾಸವಿಟ್ಟು ಮತ ಚಲಾಯಿಸಿದ ಶಿಕ್ಷಕ ಮತದಾರರಿಗೆ ಕೃತಜ್ಞತೆ ಸಲ್ಲಿಸಿದರು.

ಈ ಗೆಲುವು ಉಭಯ ಪಕ್ಷಗಳ ಒಗ್ಗಟ್ಟು ಹಾಗೂ ಸಂಘಟನಾ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ. ಚುನಾವಣೆಯಲ್ಲಿ ಅಹೋರಾತ್ರಿ ಶ್ರಮಿಸಿದ ಪ್ರತಿಯೊಬ್ಬ ಕಾರ್ಯಕರ್ತರ ಕೊಡುಗೆ ಮಹತ್ವದ್ದಾಗಿದೆ. ಕಾರ್ಯಕರ್ತರ ಪರಿಶ್ರಮ ಮತ್ತು ಪರಸ್ಪರ ಸಹಕಾರದಿಂದ ಉತ್ತಮ ಫಲಿತಾಂಶ ದೊರೆತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನರಲ್ಲಿ ಅಸಮಾಧಾನ ಹೆಚ್ಚುತ್ತಿದೆ ಎಂದು ಆರೋಪಿಸಿದ ಮುಖಂಡರು, ವಿಧಾನ ಪರಿಷತ್ ಚುನಾವಣೆಯ ಫಲಿತಾಂಶವು ಮುಂದಿನ ರಾಜಕೀಯ ಬೆಳವಣಿಗೆಗಳಿಗೆ ಮಹತ್ವದ ಸೂಚನೆಯಾಗಿದೆ ಎಂದು ಅಭಿಪ್ರಾಯಪಟ್ಟರು.

ಮುಂದಿನ ದಿನಗಳಲ್ಲಿಯೂ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಒಗ್ಗಟ್ಟಿನಿಂದ ಪಕ್ಷ ಸಂಘಟನೆಗೆ ಶ್ರಮಿಸಬೇಕು. ಶಿಕ್ಷಕರ ಸಮಸ್ಯೆಗಳ ಪರಿಹಾರ ಹಾಗೂ ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿಗೆ ನೂತನವಾಗಿ ಆಯ್ಕೆಯಾದ ವಿಧಾನ ಪರಿಷತ್ ಸದಸ್ಯರು ಆದ್ಯತೆ ನೀಡಬೇಕು ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ನಗರ ಘಟಕದ ಅಧ್ಯಕ್ಷ ಭೀಮಣ್ಣ ನಾಯಕ ಗೋಸಲ, ದೇವದುರ್ಗ ತಾಲೂಕು ಪರಿಶಿಷ್ಟ ಪಂಗಡ ಘಟಕದ ಅಧ್ಯಕ್ಷ ರಾಮಣ್ಣ ನಾಯಕ ಮದರಕಲ್, ವಕ್ತಾರ ಗೋವಿಂದರಾಜ್ ನಾಯಕ ಕೊತ್ತದೊಡ್ಡಿ, ಯುವ ಘಟಕದ ಅಧ್ಯಕ್ಷ ರಮೇಶ್ ರಾಮನಾಳ, ಅರಕೇರಾ ತಾಲೂಕು ಪರಿಶಿಷ್ಟ ಜಾತಿ ಘಟಕದ ಅಧ್ಯಕ್ಷ ಮಾರೆಪ್ಪ ಭೋವಿ, ಪ್ರಭು ದೊರೆ, ಬಸವರಾಜಗೌಡ, ಹನುಮಂತರಾಯ, ದೇವು ನಾಯಕ, ಹುಲಿರಾಜ ನಾಯಕ, ಮೌನೇಶ್ ಹೊಸೂರು ಸಿದ್ದಾಪುರ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# 10 ತಿಂಗಳ ವೇತನ ಬಾಕಿ: ನೀರಾವರಿ ಇಲಾಖೆ ವಿರುದ್ಧ ಕಾರ್ಮಿಕರ ಪ್ರತಿಭಟನೆ



ಮಾನ್ವಿ: ಕಳೆದ 10 ತಿಂಗಳಿಂದ ಬಾಕಿ ಉಳಿದಿರುವ ವೇತನವನ್ನು ಕೂಡಲೇ ಬಿಡುಗಡೆ ಮಾಡುವಂತೆ ಆಗ್ರಹಿಸಿ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದ ನೇತೃತ್ವದಲ್ಲಿ ಕಾರ್ಮಿಕರು ಪಟ್ಟಣದ ನೀರಾವರಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರ ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ತುಂಗಭದ್ರಾ ನೀರಾವರಿ ಇಲಾಖೆಯ ಮಾನ್ವಿ ಉಪವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಸಕಾಲದಲ್ಲಿ ವೇತನ ಪಾವತಿಯಾಗದಿರುವುದರಿಂದ ಆರ್ಥಿಕ ಸಂಕಷ್ಟ ಎದುರಾಗಿದೆ. ತಿಂಗಳುಗಟ್ಟಲೆ ಸಂಬಳವಿಲ್ಲದೆ ದುಡಿಯುತ್ತಿರುವ ಕಾರ್ಮಿಕರು ಕುಟುಂಬದ ದೈನಂದಿನ ಖರ್ಚುಗಳನ್ನು ನಿಭಾಯಿಸಲು ಪರದಾಡುವಂತಾಗಿದೆ ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದ ಸಿರವಾರ ವಿಭಾಗದ ಅಧ್ಯಕ್ಷ ರಾಜಾಸಾಬ್ ಮಲ್ಲಟ, ಇಲಾಖೆಯು ನಿಗದಿತ ಸಮಯದಲ್ಲಿ ಟೆಂಡರ್ ಪ್ರಕ್ರಿಯೆ ಕೈಗೊಳ್ಳದ ಪರಿಣಾಮ ಕಾರ್ಮಿಕರ ವೇತನ ಪಾವತಿಯಲ್ಲಿ ವಿಳಂಬವಾಗಿದೆ. ಇದರಿಂದಾಗಿ ಹತ್ತು ತಿಂಗಳ ಸಂಬಳ ಬಾಕಿ ಉಳಿದಿದ್ದು, ಕಾರ್ಮಿಕರ ಬದುಕು ಸಂಕಷ್ಟಕ್ಕೆ ಸಿಲುಕಿದೆ ಎಂದು ಆರೋಪಿಸಿದರು.

ನೀರಾವರಿ ಇಲಾಖೆಯ ವಿವಿಧ ಕೆಲಸಗಳನ್ನು ನಿರಂತರವಾಗಿ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಅವರ ದುಡಿಮೆಗೆ ತಕ್ಕ ಪ್ರತಿಫಲ ದೊರೆಯದಿರುವುದು ಅನ್ಯಾಯವಾಗಿದೆ. ವೇತನವನ್ನೇ ನಂಬಿಕೊಂಡು ಜೀವನ ಸಾಗಿಸುತ್ತಿರುವ ಕುಟುಂಬಗಳು ಆರ್ಥಿಕ ತೊಂದರೆ ಅನುಭವಿಸುತ್ತಿವೆ. ಮನೆ ಬಾಡಿಗೆ, ಮಕ್ಕಳ ಶಿಕ್ಷಣ, ಆಹಾರ ಸಾಮಗ್ರಿಗಳ ಖರೀದಿ ಸೇರಿದಂತೆ ಅಗತ್ಯ ಖರ್ಚುಗಳನ್ನು ಭರಿಸುವುದಕ್ಕೂ ಕಷ್ಟವಾಗುತ್ತಿದೆ ಎಂದು ಕಾರ್ಮಿಕರ ಸಮಸ್ಯೆಗಳನ್ನು ವಿವರಿಸಿದರು.

ಕಾರ್ಮಿಕರಿಂದ ಕೆಲಸ ಮಾಡಿಸಿಕೊಂಡು ತಿಂಗಳುಗಟ್ಟಲೆ ವೇತನ ನೀಡದೆ ವಿಳಂಬ ಮಾಡುವುದು ಸರಿಯಾದ ಕ್ರಮವಲ್ಲ. ಸಂಬಂಧಪಟ್ಟ ಅಧಿಕಾರಿಗಳು ಕಾರ್ಮಿಕರ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸಿ, ಬಾಕಿ ಇರುವ ಟೆಂಡರ್ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಹತ್ತು ತಿಂಗಳ ವೇತನವನ್ನು ಯಾವುದೇ ವಿಳಂಬವಿಲ್ಲದೆ ಪಾವತಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯ ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ನೀರಾವರಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ವಿದ್ಯಾಸಾಗರ್ ಅವರು ಕಾರ್ಮಿಕರ ಅಹವಾಲುಗಳನ್ನು ಆಲಿಸಿದರು. ಬಳಿಕ ಮಾತನಾಡಿದ ಅವರು, ಟೆಂಡರ್ ಪ್ರಕ್ರಿಯೆಯನ್ನು ಶೀಘ್ರವಾಗಿ ಕೈಗೆತ್ತಿಕೊಂಡು ಬಾಕಿ ವೇತನ ಪಾವತಿಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಕಾರ್ಮಿಕರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವುದರ ಜೊತೆಗೆ ಮುಂದಿನ ದಿನಗಳಲ್ಲಿ ವೇತನ ಪಾವತಿಯಲ್ಲಿ ಇಂತಹ ವಿಳಂಬ ಮರುಕಳಿಸದಂತೆ ಇಲಾಖೆ ಎಚ್ಚರಿಕೆ ವಹಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ನೀರಾವರಿ ಇಲಾಖೆಯ ಕಾರ್ಮಿಕರಾದ ಜಲೀಲ್ ಪಾಷಾ, ಗೋಪಾಲರಾವ್, ರಂಗಪ್ಪ ನಾಯಕ, ಶಿವಣ್ಣ, ಇಮ್ರಾನ್, ಗೌಸ್ ಸೇರಿದಂತೆ ನೂರಾರು ಕಾರ್ಮಿಕರು ಭಾಗವಹಿಸಿದ್ದರು.

# ಪರಿಸರ ಪ್ರೇಮಿ ಅಮರೇಗೌಡ ಮಲ್ಲಾಪುರ ಅವರಿಗೆ ಪರಮ ಶ್ರೀ ಪ್ರಶಸ್ತಿ ಪ್ರದಾನ



ತುರ್ವಿಹಾಳ: ಪರಿಸರ ಸಂರಕ್ಷಣೆ ಹಾಗೂ ಹಸಿರೀಕರಣ ಕ್ಷೇತ್ರದಲ್ಲಿ ಸಲ್ಲಿಸುತ್ತಿರುವ ಸೇವೆಯನ್ನು ಗುರುತಿಸಿ ವನಸಿರಿ ಫೌಂಡೇಶನ್ ಅಧ್ಯಕ್ಷ, ಪರಿಸರ ಪ್ರೇಮಿ ಅಮರೇಗೌಡ ಮಲ್ಲಾಪುರ ಅವರಿಗೆ ತುರ್ವಿಹಾಳ ಪಟ್ಟಣದ ಶ್ರೀ ಸದ್ಗುರು ಸರ್ವೇಶ್ವರ ಮಠದ ವತಿಯಿಂದ 2026ನೇ ಸಾಲಿನ ಪ್ರತಿಷ್ಠಿತ ಪರಮ ಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪಟ್ಟಣದ ಶ್ರೀ ಸದ್ಗುರು ಸರ್ವೇಶ್ವರ ಮಠದಲ್ಲಿ ಪರಮಪೂಜ್ಯ ಶ್ರೀ ಗುರು ಗುಂಡಯ್ಯ ಅಪ್ಪಯ್ಯನವರು, ಮಾತೋಶ್ರೀ ಈರಮ್ಮ ಅಮ್ಮನವರು ಹಾಗೂ ದಾಸೋಹಮೂರ್ತಿ ಶ್ರೀ ಗುರು ರಾಚಯ್ಯ ತಾತನವರ ಪುಣ್ಯಾರಾಧನೆ ಅಂಗವಾಗಿ ಆಯೋಜಿಸಿದ್ದ 177ನೇ ಜಾತ್ರಾ ಮಹೋತ್ಸವ ಹಾಗೂ 117ನೇ ವಚನ ಪ್ರವಚನ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಜಾತ್ರಾ ಮಹೋತ್ಸವದ ಅಂಗವಾಗಿ ತುಲಾಭಾರ ಕಾರ್ಯಕ್ರಮ ಹಾಗೂ ನಿಶ್ಶಬ್ದ ಬ್ರಹ್ಮ ವಚನ ಸಂಪುಟ ಗ್ರಂಥದ ಲೋಕಾರ್ಪಣೆ ಸಮಾರಂಭವೂ ನಡೆಯಿತು.

ಕಲ್ಯಾಣ ಕರ್ನಾಟಕ ಭಾಗದಲ್ಲಿ ಪರಿಸರ ಸಂರಕ್ಷಣೆ, ಗಿಡಮರಗಳ ಪೋಷಣೆ ಹಾಗೂ ಹಸಿರೀಕರಣ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಅಮರೇಗೌಡ ಮಲ್ಲಾಪುರ ಅವರು ವನಸಿರಿ ಫೌಂಡೇಶನ್ ಮೂಲಕ ಪರಿಸರ ಜಾಗೃತಿ ಮೂಡಿಸುತ್ತಿದ್ದಾರೆ. ವಿಶೇಷವಾಗಿ ಅಮರ ಶ್ರೀ ಆಲದಮರಕ್ಕೆ ಪುನರ್ಜೀವ ನೀಡುವ ಕಾರ್ಯದಲ್ಲಿ ಅವರ ಕೊಡುಗೆಯನ್ನು ಪರಿಗಣಿಸಿ ಶ್ರೀಮಠದ ವತಿಯಿಂದ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಪರಿಸರ ಸಂರಕ್ಷಣೆ ಮತ್ತು ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡಿರುವ ವ್ಯಕ್ತಿಗಳನ್ನು ಗುರುತಿಸಿ ಗೌರವಿಸುವುದು ಸಮಾಜಮುಖಿ ಕಾರ್ಯಗಳಿಗೆ ಮತ್ತಷ್ಟು ಪ್ರೋತ್ಸಾಹ ನೀಡುತ್ತದೆ ಎಂಬ ಅಭಿಪ್ರಾಯವನ್ನು ಈ ಸಂದರ್ಭದಲ್ಲಿ ವ್ಯಕ್ತಪಡಿಸಲಾಯಿತು.

ಕಾರ್ಯಕ್ರಮದಲ್ಲಿ ಪರಮಪೂಜ್ಯ ಶ್ರೀ ಗುಂಡಯ್ಯ ಅಪ್ಪನವರು, ಚಿದಾನಂದ ಗುರುವಿನಮಠ, ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ, ಮಸ್ಕಿ ಶಾಸಕ ಆರ್. ಬಸನಗೌಡ ತುರ್ವಿಹಾಳ, ಮಾಜಿ ಶಾಸಕ ಪ್ರತಾಪಗೌಡ ಪಾಟೀಲ್ ಸೇರಿದಂತೆ ಶ್ರೀಮಠದ ಭಕ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ರಾಯಚೂರು ವಿಶ್ವವಿದ್ಯಾಲಯದಲ್ಲಿ ತತ್ವಪದ ಸಾಹಿತ್ಯ ಅಧ್ಯಯನ ಪೀಠ ಸ್ಥಾಪನೆಗೆ ಕನ್ನಡ ಸಾಹಿತ್ಯ ಪರಿಷತ್ ಆಗ್ರಹ



ರಾಯಚೂರು: ಕಲ್ಯಾಣ ಕರ್ನಾಟಕ ಭಾಗದ ವಿಶಿಷ್ಟ ಸಾಂಸ್ಕೃತಿಕ ಪರಂಪರೆಯಾದ ತತ್ವಪದ ಸಾಹಿತ್ಯದ ಸಂರಕ್ಷಣೆ, ಸಂಶೋಧನೆ ಹಾಗೂ ಪ್ರಸಾರಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ರಾಯಚೂರಿನ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದಲ್ಲಿ ಪ್ರತ್ಯೇಕ ತತ್ವಪದ ಸಾಹಿತ್ಯ ಅಧ್ಯಯನ ಪೀಠವನ್ನು ಸ್ಥಾಪಿಸಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ರಾಯಚೂರು ಜಿಲ್ಲಾ ಘಟಕ ಒತ್ತಾಯಿಸಿದೆ.

ಈ ಸಂಬಂಧ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ ನೇತೃತ್ವದ ನಿಯೋಗವು ವಿಶ್ವವಿದ್ಯಾಲಯದ ಕುಲಪತಿಗಳಿಗೆ ಮನವಿ ಸಲ್ಲಿಸಿ, ತತ್ವಪದ ಸಾಹಿತ್ಯದ ಐತಿಹಾಸಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಮಹತ್ವವನ್ನು ವಿವರಿಸಿತು.

ರಾಯಚೂರು ಜಿಲ್ಲೆ ಶರಣರು, ಹರಿದಾಸರು, ತತ್ವಪದಕಾರರು ಹಾಗೂ ಸೂಫಿ ಸಂತರ ಸಮೃದ್ಧ ಪರಂಪರೆಯನ್ನು ಹೊಂದಿರುವ ನೆಲವಾಗಿದೆ. ಈ ಭಾಗದಲ್ಲಿ ರೂಪುಗೊಂಡ ತತ್ವಪದ ಸಾಹಿತ್ಯವು ಶರಣರ ವಚನಗಳು ಹಾಗೂ ಹರಿದಾಸರ ಕೀರ್ತನೆಗಳಿಗಿಂತ ವಿಭಿನ್ನವಾದ ವೈಚಾರಿಕತೆ ಮತ್ತು ಅಭಿವ್ಯಕ್ತಿ ಶೈಲಿಯನ್ನು ಹೊಂದಿದೆ. ಜನಸಾಮಾನ್ಯರಿಗೆ ಸುಲಭವಾಗಿ ಅರ್ಥವಾಗುವ ಜನಪದ ಭಾಷೆ, ಒಗಟುಗಳು ಹಾಗೂ ರೂಪಕಗಳ ಮೂಲಕ ಜೀವನದ ಸತ್ಯಗಳನ್ನು ತಿಳಿಸುವ ವಿಶಿಷ್ಟ ಸಾಹಿತ್ಯ ಪ್ರಕಾರ ಇದಾಗಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ತತ್ವಪದಕಾರರು ತಮ್ಮ ಕಾಲಘಟ್ಟದಲ್ಲಿ ಸಮಾಜದಲ್ಲಿ ಬೇರೂರಿದ್ದ ಮೂಢನಂಬಿಕೆಗಳು, ಅಂಧಶ್ರದ್ಧೆ, ಅಸಮಾನತೆ ಹಾಗೂ ಅವೈಜ್ಞಾನಿಕ ಆಚರಣೆಗಳನ್ನು ಪ್ರಶ್ನಿಸುವ ಮೂಲಕ ಜನರಲ್ಲಿ ವೈಚಾರಿಕ ಪ್ರಜ್ಞೆ ಮೂಡಿಸಲು ಶ್ರಮಿಸಿದ್ದಾರೆ. ಮಾನವೀಯ ಮೌಲ್ಯಗಳು, ಧಾರ್ಮಿಕ ಸಹಿಷ್ಣುತೆ, ಕೋಮು ಸೌಹಾರ್ದತೆ, ಸಾಮಾಜಿಕ ಸಾಮರಸ್ಯ ಹಾಗೂ ಸಾಂಸ್ಕೃತಿಕ ಸಮನ್ವಯತೆಯ ಸಂದೇಶಗಳನ್ನು ತಮ್ಮ ರಚನೆಗಳ ಮೂಲಕ ಪರಿಣಾಮಕಾರಿಯಾಗಿ ಸಾರಿದ್ದಾರೆ ಎಂದು ಪರಿಷತ್ತು ತಿಳಿಸಿದೆ.

ತತ್ವಪದ ಸಾಹಿತ್ಯವು ಕೇವಲ ಆಧ್ಯಾತ್ಮಿಕ ಚಿಂತನೆಗೆ ಸೀಮಿತವಾಗದೆ, ಸಮಾಜ ಸುಧಾರಣೆ ಹಾಗೂ ಮಾನವೀಯ ಸಂಬಂಧಗಳ ಬಲವರ್ಧನೆಗೂ ಮಹತ್ವದ ಕೊಡುಗೆ ನೀಡಿದೆ. ಇಂತಹ ಅಪರೂಪದ ಸಾಹಿತ್ಯ ಪರಂಪರೆಯ ಕುರಿತು ಸಮಗ್ರ ಅಧ್ಯಯನ ನಡೆಸುವುದು ಇಂದಿನ ಅಗತ್ಯವಾಗಿದೆ ಎಂದು ಜಿಲ್ಲಾಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ ಅಭಿಪ್ರಾಯಪಟ್ಟಿದ್ದಾರೆ.

ತತ್ವಪದಕಾರರ ಜೀವನ ಚರಿತ್ರೆ, ಅವರ ಸಾಹಿತ್ಯದಲ್ಲಿನ ಸಾಮಾಜಿಕ ಚಿಂತನೆ, ಜನಪದ ಸಂಸ್ಕೃತಿಯ ಪ್ರಭಾವ ಹಾಗೂ ತಾತ್ವಿಕ ಸಂದೇಶಗಳ ಕುರಿತು ವ್ಯವಸ್ಥಿತ ಸಂಶೋಧನೆ ನಡೆಯಬೇಕಿದೆ. ವಿವಿಧೆಡೆ ಚದುರಿಹೋಗಿರುವ ತತ್ವಪದಗಳ ಸಂಗ್ರಹ, ದಾಖಲಾತಿ, ಪ್ರಕಟಣೆ ಹಾಗೂ ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯಕ್ಕೂ ವಿಶ್ವವಿದ್ಯಾಲಯ ಮುಂದಾಗಬೇಕು ಎಂದು ಮನವಿ ಮಾಡಲಾಗಿದೆ.

ವಿಶ್ವವಿದ್ಯಾಲಯದಲ್ಲಿ ಪ್ರತ್ಯೇಕ ಅಧ್ಯಯನ ಪೀಠ ಸ್ಥಾಪನೆಯಾದರೆ ಸಂಶೋಧನಾ ವಿದ್ಯಾರ್ಥಿಗಳು, ಸಾಹಿತಿಗಳು ಹಾಗೂ ಅಧ್ಯಯನಾಸಕ್ತರಿಗೆ ಅನುಕೂಲವಾಗುವುದರ ಜೊತೆಗೆ ಕಲ್ಯಾಣ ಕರ್ನಾಟಕದ ವಿಶಿಷ್ಟ ಸಾಹಿತ್ಯ ಪರಂಪರೆಗೆ ಶೈಕ್ಷಣಿಕ ಮನ್ನಣೆ ದೊರೆಯಲಿದೆ. ಆದ್ದರಿಂದ ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ತು ಆಗ್ರಹಿಸಿದೆ.

ಈ ಸಂದರ್ಭದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಬಿ. ವಿಜಯ ರಾಜೇಂದ್ರ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕೋಶಾಧ್ಯಕ್ಷ ನಾಗಪ್ಪ ಹೊರಪ್ಯಾಟಿ ಹಾಗೂ ಭೀಮನಗೌಡ ಪಾಟೀಲ್ ಇಟಗಿ ಉಪಸ್ಥಿತರಿದ್ದರು.

# ಶರಣರ ಜೀವನ ದರ್ಶನವೇ ಇಂದಿನ ಸಮಾಜಕ್ಕೆ ದಾರಿದೀಪ: ಡಾ. ಅರುಣಾ ಹಿರೇಮಠ



ರಾಯಚೂರು: ಹನ್ನೆರಡನೇ ಶತಮಾನದ ಶಿವಶರಣರು ಪ್ರತಿಪಾದಿಸಿದ ಕಾಯಕ, ಭಕ್ತಿ, ದಾಸೋಹ ಮತ್ತುಸೇವಾಮನೋಭಾವದಂತಹಜೀವನಮೌಲ್ಯಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶಕವಾಗಿವೆ. ಶರಣರ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ದಿನನಿತ್ಯದ ಬದುಕಿನಲ್ಲಿ ಅಳವಡಿಸಿಕೊಂಡು ಮುಂದಿನ ಪೀಳಿಗೆಗೆ ಪರಿಚಯಿಸಬೇಕು ಎಂದು ನಗರದ ಎಲ್‌ವಿಡಿ ಪದವಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಡಾ. ಅರುಣಾ ಹಿರೇಮಠ ಹೇಳಿದರು.

ನಗರದ ಎನ್‌ಜಿಒ ಕಾಲೋನಿಯ ಶ್ರೀ ನೀಲಕಂಠೇಶ್ವರ ದೇವಸ್ಥಾನದ ಟ್ರಸ್ಟ್ ವತಿಯಿಂದ ಶೀಗಿ ಹುಣ್ಣಿಮೆ ಅಂಗವಾಗಿ ಸೋಮವಾರ ಸಂಜೆ ದೇವಸ್ಥಾನದ ಆವರಣದಲ್ಲಿ ಆಯೋಜಿಸಿದ್ದ 'ಜ್ಞಾನದಾಸೋಹ' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ, 'ಶರಣರ ಜೀವನ ದರ್ಶನ' ವಿಷಯ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಹನ್ನೆರಡನೇ ಶತಮಾನದ ಶರಣರು ಸಮಾಜಕ್ಕೆ ನೀಡಿದ ಸಂದೇಶಗಳು ಕೇವಲ ಧಾರ್ಮಿಕ ವಿಚಾರಗಳಿಗೆ ಸೀಮಿತವಾಗಿರದೆ, ಮಾನವೀಯತೆ, ಸಮಾನತೆ, ನೈತಿಕತೆ ಹಾಗೂ ಉತ್ತಮ ಜೀವನ ನಡೆಸುವ ಮಾರ್ಗವನ್ನು ತಿಳಿಸುತ್ತವೆ. ಶರಣರ ನಡೆನುಡಿಗಳು ನಮ್ಮ ಬದುಕಿಗೆ ದಾರಿದೀಪವಾಗಬೇಕು. ಅವರ ಚಿಂತನೆಗಳನ್ನು ಮನೆಯಿಂದ ಸಮಾಜದವರೆಗೆ ತಲುಪಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ತಿಳಿಸಿದರು.

ಬಸವಣ್ಣನವರ 'ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ, ಮುನಿಯಬೇಡ, ಅನ್ಯರಿಗೆ ಅಸಹ್ಯಪಡಬೇಡ, ತನ್ನ ಬಣ್ಣಿಸಬೇಡ, ಇದಿರ ಹಳಿಯಲು ಬೇಡ' ಎಂಬ ವಚನವು ವ್ಯಕ್ತಿಯ ಅಂತರಂಗ ಮತ್ತು ಬಹಿರಂಗ ಶುದ್ಧಿಯ ಮಹತ್ವವನ್ನು ಸಾರುತ್ತದೆ. ಇಂತಹ ವಚನಗಳನ್ನು ಕೇವಲ ಪಠಿಸುವುದಕ್ಕಿಂತ ಅವುಗಳ ಆಶಯವನ್ನು ಜೀವನದಲ್ಲಿ ಎಷ್ಟರ ಮಟ್ಟಿಗೆ ಪಾಲಿಸುತ್ತಿದ್ದೇವೆ ಎಂಬುದನ್ನು ಪ್ರತಿಯೊಬ್ಬರೂ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಹೇಳಿದರು.

ಶಿವಶರಣರು ಆಡಂಬರವಿಲ್ಲದ ಸರಳ ಜೀವನ ನಡೆಸಿ ಸತ್ಯ, ಪ್ರಾಮಾಣಿಕತೆ ಮತ್ತು ಕಾಯಕಕ್ಕೆ ಹೆಚ್ಚಿನ ಮಹತ್ವ ನೀಡಿದ್ದರು. ಹನ್ನೆರಡನೇ ಶತಮಾನದಲ್ಲಿ ಅನುಭವ ಮಂಟಪದ ಮೂಲಕ ವಿಚಾರ ವಿನಿಮಯಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಮಹಿಳೆಯರಿಗೂ ಆತ್ಮಗೌರವ, ಅಭಿವ್ಯಕ್ತಿ ಸ್ವಾತಂತ್ರ್ಯ ಹಾಗೂ ಜ್ಞಾನಾರ್ಜನೆಗೆ ಅವಕಾಶ ಒದಗಿಸುವ ಮೂಲಕ ಸಾಮಾಜಿಕ ಪರಿವರ್ತನೆಗೆ ಶರಣರು ಮಹತ್ವದ ಕೊಡುಗೆ ನೀಡಿದರು ಎಂದು ವಿವರಿಸಿದರು.

ಅಂದಿನ ಸಾಮಾಜಿಕ ಕಟ್ಟುಪಾಡುಗಳ ನಡುವೆಯೂ ಶರಣರು ಸ್ತ್ರೀಪುರುಷ ಸಮಾನತೆ, ಮಾನವೀಯತೆ ಹಾಗೂ ನೈತಿಕ ಬದುಕಿನ ಮಹತ್ವವನ್ನು ಪ್ರತಿಪಾದಿಸಿದ್ದರು. ತಮ್ಮ ಜೀವನದಲ್ಲಿ ಎದುರಾದ ಸಂಕಷ್ಟಗಳನ್ನು ಧೈರ್ಯದಿಂದ ಎದುರಿಸಿ ಸಮಾಜಕ್ಕೆ ಹೊಸ ಚಿಂತನೆಗಳನ್ನು ನೀಡಿದ್ದರು ಎಂದು ತಿಳಿಸಿದರು.

ಶರಣರು ಲೋಕಕಲ್ಯಾಣಕ್ಕಾಗಿ ಅಂತರಂಗದ ಭಕ್ತಿ, ಕಾಯಕವೇ ಕೈಲಾಸ, ದಾಸೋಹ ಭಾವ, ಸದಾಚಾರ ಹಾಗೂ ಇಷ್ಟಲಿಂಗ ಪೂಜೆಯಂತಹ ತತ್ವಗಳನ್ನು ಬೋಧಿಸಿದ್ದಾರೆ. ಅಹಂಕಾರವನ್ನು ತೊರೆದು ವಿನಮ್ರತೆಯಿಂದ ಕಾಯಕದಲ್ಲಿ ತೊಡಗಿಸಿಕೊಳ್ಳುವುದೇ ನಿಜವಾದ ಶಿವಪೂಜೆ ಎಂಬ ಸಂದೇಶವನ್ನು ನೀಡಿದ್ದಾರೆ. ಜೀವನದಲ್ಲಿ ಎದುರಾಗುವ ಸವಾಲುಗಳನ್ನು ಅಹಂಕಾರದಿಂದಲ್ಲ, ಸಮಾಧಾನ ಮತ್ತು ಆತ್ಮವಿಶ್ವಾಸದಿಂದ ಎದುರಿಸಬೇಕು ಎಂದು ಸಲಹೆ ನೀಡಿದರು.

ಅಲ್ಲಮಪ್ರಭು ಸೇರಿದಂತೆ ಅನೇಕ ಶಿವಶರಣರು ತಮ್ಮ ವಚನಗಳ ಮೂಲಕ ಜ್ಞಾನದ ಮಹತ್ವವನ್ನು ಸಾರಿದ್ದಾರೆ. ಸಮಾಜದಲ್ಲಿ ಅರಿವು ಮೂಡಿಸುವುದು, ಅಜ್ಞಾನವನ್ನು ದೂರ ಮಾಡುವುದು ಹಾಗೂ ಪ್ರತಿಯೊಬ್ಬರಲ್ಲೂ ಮಾನವೀಯ ಮೌಲ್ಯಗಳನ್ನು ಬೆಳೆಸುವುದೇ ಶರಣರ ಚಿಂತನೆಯ ಪ್ರಮುಖ ಆಶಯವಾಗಿದೆ ಎಂದು ಡಾ. ಅರುಣಾ ಹಿರೇಮಠ ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ರಾಯಚೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿರುವ 12ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ರಾಷ್ಟ್ರಪ್ರಶಸ್ತಿ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ರಾಮಣ್ಣ ಹವಳೆ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಶ್ರೀ ನೀಲಕಂಠೇಶ್ವರ ದೇವಸ್ಥಾನದ ಟ್ರಸ್ಟ್ ಅಧ್ಯಕ್ಷ ಮಹಾಂತೇಶ ಚಾಗಲ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಪೂರ್ಣಿಮಾ ಚಂದ್ರಶೇಖರ್ ಮಟಮಾರಿ ಉಪಸ್ಥಿತರಿದ್ದರು. ಉಪನ್ಯಾಸ ಕಾರ್ಯಕ್ರಮದ ನಂತರ ಭಕ್ತರಿಗೆ ಪ್ರಸಾದ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಬಸವರಾಜ ಪಡಶೆಟ್ಟಿ, ಪ್ರಭನಗೌಡ ಹಂಚಿನಾಳ, ಶಂಕರಗೌಡ, ಡಾ. ಬಿ. ವಿಜಯ ರಾಜೇಂದ್ರ, ಬಸವರಾಜ ಪ್ರೇರಣಾ, ಶಿವಶಂಕರ್, ವೀರಭದ್ರಯ್ಯ ಗಾಣದಾಳ ಮಠ, ನೀಲಕಂಠ, ಸೂಗೂರೇಶ್ವರ ಸಾಲಿಮಠ ಸೇರಿದಂತೆ ದೇವಸ್ಥಾನದ ಟ್ರಸ್ಟ್ ಪದಾಧಿಕಾರಿಗಳು, ಬಡಾವಣೆಯ ಭಕ್ತರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಅಕ್ರಮ ಮದ್ಯ, ಗಾಂಜಾ ಮಾರಾಟಕ್ಕೆ ಕಡಿವಾಣ ಹಾಕಿ: ಪೊಲೀಸ್ ವರಿಷ್ಠಾಧಿಕಾರಿಗೆ ಬಿಜೆಪಿ ಮುಖಂಡರ ಮನವಿ



ರಾಯಚೂರು, ಅ. 27: ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚುತ್ತಿರುವ ಅಕ್ರಮ ಮದ್ಯ ಮತ್ತು ಗಾಂಜಾ ಮಾರಾಟವನ್ನು ನಿಯಂತ್ರಿಸಿ, ಇಂತಹ ಚಟುವಟಿಕೆಗಳಲ್ಲಿ ತೊಡಗಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಬಿಜೆಪಿ ಮುಖಂಡರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ರಾಯಚೂರು ನಗರ ಸೇರಿದಂತೆ ಜಿಲ್ಲೆಯ ವಿವಿಧ ಗ್ರಾಮೀಣ ಭಾಗಗಳಲ್ಲಿ ಅಕ್ರಮ ಮದ್ಯ ಹಾಗೂ ಮಾದಕ ವಸ್ತುಗಳ ಮಾರಾಟ ನಡೆಯುತ್ತಿರುವ ಬಗ್ಗೆ ದೂರುಗಳು ಕೇಳಿಬರುತ್ತಿವೆ. ಇಂತಹ ಚಟುವಟಿಕೆಗಳಿಂದ ಸಾರ್ವಜನಿಕರ ನೆಮ್ಮದಿಗೆ ಭಂಗ ಉಂಟಾಗುತ್ತಿದ್ದು, ವಿಶೇಷವಾಗಿ ಯುವಜನತೆ ಮಾದಕ ವ್ಯಸನಕ್ಕೆ ಒಳಗಾಗುವ ಆತಂಕ ಎದುರಾಗಿದೆ. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಆರ್ಥಿಕ ಮತ್ತು ಸಾಮಾಜಿಕ ಜೀವನದ ಮೇಲೂ ದುಷ್ಪರಿಣಾಮ ಬೀರುತ್ತಿದೆ ಎಂದು ಮನವಿಯಲ್ಲಿ ಕಳವಳ ವ್ಯಕ್ತಪಡಿಸಲಾಗಿದೆ.

ಅಕ್ರಮ ಮದ್ಯ ಮತ್ತು ಗಾಂಜಾ ಮಾರಾಟದಂತಹ ಚಟುವಟಿಕೆಗಳು ಸಮಾಜದ ಸ್ವಾಸ್ಥ್ಯಕ್ಕೆ ಧಕ್ಕೆ ತರುವುದರ ಜೊತೆಗೆ ಕಾನೂನು ಸುವ್ಯವಸ್ಥೆಯ ಮೇಲೆಯೂ ಪರಿಣಾಮ ಬೀರುವ ಸಾಧ್ಯತೆಯಿದೆ. ಆದ್ದರಿಂದ ಪೊಲೀಸ್ ಇಲಾಖೆ ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ಅಕ್ರಮ ಮಾರಾಟ ನಡೆಯುತ್ತಿರುವ ಸ್ಥಳಗಳನ್ನು ಗುರುತಿಸಿ ನಿರಂತರ ದಾಳಿ ನಡೆಸಬೇಕು. ಮಾರಾಟಗಾರರು ಹಾಗೂ ಈ ಜಾಲದ ಹಿಂದೆ ಕಾರ್ಯನಿರ್ವಹಿಸುತ್ತಿರುವವರನ್ನು ಪತ್ತೆಹಚ್ಚಿ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಲಾಗಿದೆ.

ಇತ್ತೀಚೆಗೆ ನಗರದ ಎಲ್‌ಬಿಎಸ್ ನಗರದಲ್ಲಿ ನಡೆದ ಕೊಲೆ ಪ್ರಕರಣ ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ. ಇಂತಹ ಘಟನೆಗಳ ಹಿನ್ನೆಲೆಯಲ್ಲಿ ನಗರದಲ್ಲಿ ಕಾನೂನು ಸುವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ. ಅಪರಾಧ ಚಟುವಟಿಕೆಗಳನ್ನು ತಡೆಗಟ್ಟಲು ಪೊಲೀಸ್ ಗಸ್ತು ಹೆಚ್ಚಿಸುವುದರ ಜೊತೆಗೆ ಅನುಮಾನಾಸ್ಪದ ಚಟುವಟಿಕೆಗಳ ಮೇಲೆ ನಿಗಾ ವಹಿಸಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಮಾದಕ ವಸ್ತುಗಳ ಹಾವಳಿಯಿಂದ ಯುವ ಸಮುದಾಯವನ್ನು ರಕ್ಷಿಸುವುದು ಅತ್ಯಂತ ಅಗತ್ಯವಾಗಿದೆ. ಅಕ್ರಮ ಮದ್ಯ ಹಾಗೂ ಗಾಂಜಾ ಮಾರಾಟದ ವಿರುದ್ಧ ಪರಿಣಾಮಕಾರಿ ಕಾರ್ಯಾಚರಣೆ ನಡೆಸುವ ಮೂಲಕ ಸಾರ್ವಜನಿಕರಲ್ಲಿ ಸುರಕ್ಷತೆಯ ವಿಶ್ವಾಸ ಮೂಡಿಸಬೇಕು. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕಾನೂನುಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡದಂತೆ ಸಂಬಂಧಪಟ್ಟ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಅಕ್ರಮ ಚಟುವಟಿಕೆಗಳ ಕುರಿತು ಸಾರ್ವಜನಿಕರಿಂದ ಬರುವ ದೂರುಗಳಿಗೆ ಪೊಲೀಸ್ ಇಲಾಖೆ ತ್ವರಿತವಾಗಿ ಸ್ಪಂದಿಸಬೇಕು. ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದರ ಜೊತೆಗೆ ಇಂತಹ ಪ್ರಕರಣಗಳು ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರ ಘಟಕದ ಉಪಾಧ್ಯಕ್ಷರಾದ ವಕೀಲ ರಂಗನಾಥ ಅಸ್ಕಿಹಾಳ, ನಾಗರಾಜ್ ನಾಯಕ್, ಪ್ರಧಾನ ಕಾರ್ಯದರ್ಶಿಗಳಾದ ಎಸ್. ಹನುಮಂತ ನಾಯಕ್, ಸಿದ್ದೇಶ್, ಕಾರ್ಯದರ್ಶಿಗಳಾದ ನರಸಿಂಹ ನಾಯಕ್, ರಾಣಾ ನಾಯಕ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಐದು ದಶಕಗಳ ಸಹಕಾರಿ ಸೇವೆಗೆ ಸಾಕ್ಷಿಯಾದ ಜಾಲಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘ



ಜಾಲಹಳ್ಳಿ, ಅ. 27: ರೈತರ ಆರ್ಥಿಕ ಸಬಲೀಕರಣ ಹಾಗೂ ಗ್ರಾಮೀಣ ಕೃಷಿ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಾ ಬಂದಿರುವ ಜಾಲಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವು ಸ್ಥಾಪನೆಯಾಗಿ 50 ವರ್ಷಗಳನ್ನು ಪೂರೈಸಿದ್ದು, ಸುವರ್ಣ ಮಹೋತ್ಸವದ ಸಂಭ್ರಮಕ್ಕೆ ಸಾಕ್ಷಿಯಾಗಿದೆ. ಈ ಸಂದರ್ಭದಲ್ಲಿ ಸಂಘದ ಅಭಿವೃದ್ಧಿಗೆ ಅಡಿಪಾಯ ಹಾಕಿದ ಸಹಕಾರ ಸಂಘದ ಪಿತಾಮಹ ದಿವಂಗತ ಸಿದ್ಧನಗೌಡ ಸಣ್ಣರಾಮನಗೌಡ ಅವರನ್ನು ಸ್ಮರಿಸಿ ಗೌರವ ಸಲ್ಲಿಸಲಾಯಿತು.

1976ರಲ್ಲಿ ಅಸ್ತಿತ್ವಕ್ಕೆ ಬಂದ ಜಾಲಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವು ಐದು ದಶಕಗಳ ಅವಧಿಯಲ್ಲಿ ರೈತರು ಹಾಗೂ ಸದಸ್ಯರ ವಿಶ್ವಾಸಕ್ಕೆ ಪಾತ್ರವಾಗಿದ್ದು, ಕೃಷಿ ಕ್ಷೇತ್ರದ ಅಗತ್ಯಗಳಿಗೆ ಸ್ಪಂದಿಸುವ ಮೂಲಕ ಗ್ರಾಮೀಣ ಆರ್ಥಿಕ ವ್ಯವಸ್ಥೆಗೆ ತನ್ನದೇ ಆದ ಕೊಡುಗೆ ನೀಡಿದೆ.

ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ಬಿತ್ತನೆ ಬೀಜ, ರಸಗೊಬ್ಬರ ಪೂರೈಕೆ ಹಾಗೂ ಬೆಳೆ ಸಾಲ ಸೌಲಭ್ಯಗಳನ್ನು ಒದಗಿಸುವ ಮೂಲಕ ರೈತರ ಕೃಷಿ ಕಾರ್ಯಗಳಿಗೆ ನೆರವಾಗುತ್ತಾ ಬಂದಿದೆ. ಕೃಷಿ ಉತ್ಪಾದನೆಗೆ ಅಗತ್ಯವಾದ ಆರ್ಥಿಕ ನೆರವು ಕಲ್ಪಿಸುವುದರ ಜೊತೆಗೆ ಸಹಕಾರ ತತ್ವದಡಿ ರೈತರನ್ನು ಒಗ್ಗೂಡಿಸಿ ಗ್ರಾಮೀಣ ಭಾಗದಲ್ಲಿ ಸಹಕಾರಿ ಚಳವಳಿಯನ್ನು ಬಲಪಡಿಸುವಲ್ಲಿ ಸಂಘವು ಮಹತ್ವದ ಪಾತ್ರ ನಿರ್ವಹಿಸಿದೆ.

ಸಂಘದ ಸ್ಥಾಪನೆಯಿಂದ ಇಂದಿನವರೆಗಿನ ಬೆಳವಣಿಗೆಯಲ್ಲಿ ಹಲವು ಹಿರಿಯ ಸಹಕಾರಿಗಳ ಪರಿಶ್ರಮ ಹಾಗೂ ಮಾರ್ಗದರ್ಶನ ಪ್ರಮುಖವಾಗಿದೆ. ವಿಶೇಷವಾಗಿ ಸಂಘದ ಬೆಳವಣಿಗೆಗೆ ಶ್ರಮಿಸಿದ ದಿವಂಗತ ಸಿದ್ಧನಗೌಡ ಸಣ್ಣರಾಮನಗೌಡ ಅವರ ಸೇವೆಯನ್ನು ಸುವರ್ಣ ಮಹೋತ್ಸವದ ಸಂದರ್ಭದಲ್ಲಿ ಸ್ಮರಿಸಲಾಯಿತು.

ಸಂಘದ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ದಿವಂಗತ ಸಿದ್ಧನಗೌಡ ಸಣ್ಣರಾಮನಗೌಡ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಲಾಯಿತು. ಶರಣಬಸವ ಅವರು ಪೂಜಾ ವಿಧಿವಿಧಾನಗಳನ್ನು ನೆರವೇರಿಸಿದರು.

ಐವತ್ತು ವರ್ಷಗಳ ಸುದೀರ್ಘ ಪಯಣವನ್ನು ಪೂರ್ಣಗೊಳಿಸಿರುವ ಸಂಘವು ರೈತ ಸಮುದಾಯದೊಂದಿಗೆ ಹೊಂದಿರುವ ನಿಕಟ ಸಂಬಂಧ ಹಾಗೂ ಸಹಕಾರ ಕ್ಷೇತ್ರದಲ್ಲಿ ಗಳಿಸಿರುವ ವಿಶ್ವಾಸವನ್ನು ಈ ಸಂದರ್ಭ ಸ್ಮರಿಸಲಾಯಿತು. ಮುಂದಿನ ದಿನಗಳಲ್ಲಿಯೂ ರೈತರ ಅಗತ್ಯಗಳಿಗೆ ಅನುಗುಣವಾಗಿ ಸೇವಾ ಚಟುವಟಿಕೆಗಳನ್ನು ಮುಂದುವರಿಸುವ ಮಹತ್ವವನ್ನು ಒತ್ತಿಹೇಳಲಾಯಿತು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಗೋವಿಂದಪ್ಪ ಹಲಗೇರಿ, ಉಪಾಧ್ಯಕ್ಷ ಖುರ್ಷಾದ್ ಪಾಟೀಲ್, ನಿರ್ದೇಶಕರಾದ ಈಶಣ್ಣ ಕಾಟ್ಮಳ್ಳಿ, ನವೀನ್ ಪಾಟೀಲ್, ಅಮರೇಗೌಡ ಪೊಲೀಸ್ ಪಾಟೀಲ್, ಯಂಕಣ್ಣ ಯರಕಮಟ್ಟಿ, ಶಿವಬಸಪ್ಪ ರಾಂಪಳ್ಳಿ ಉಪಸ್ಥಿತರಿದ್ದರು.

ಮುಖಂಡರಾದ ಆನಂದ್ ಪಾಟೀಲ್, ಶರಣಬಸವ ನಾಡಗೌಡ, ಗೋವಿಂದಪ್ಪ ತಿಂಪೂರು, ರಂಗನಾಥ ಮಕಾಸಿ, ಮಾಜಿ ನಿರ್ದೇಶಕರಾದ ಮುದುರಂಗಪ್ಪ ವಠಾರ, ಶಿವನಗೌಡ ಕುಳ್ಳಿ, ಹುಸೇನಪ್ಪ ಗುತ್ತೇದಾರ್, ರಮೇಶ್ ತೆಗ್ಗೆಲಿ, ಗಂಗಪ್ಪ ತೆಗ್ಗಿಲ್ಲಿ, ಯಲಪ್ಪ ಬಿಸಾಲ್, ಬಸವರಾಜ ಸಿದ್ದನಕಲ್, ಅಶೋಕ್ ಬೋವಿ ಸೇರಿದಂತೆ ಸಂಘದ ಸದಸ್ಯರು ಹಾಗೂ ಇತರರು ಭಾಗವಹಿಸಿದ್ದರು.

# ವ್ಯಾಪಾರಸ್ಥನ ಬರ್ಬರ ಹತ್ಯೆಗೆ ಕನ್ನಡಪರ ಸಂಘಟನೆಗಳ ಆಕ್ರೋಶ: ನಗರದಲ್ಲಿ ಭದ್ರತೆ ಹೆಚ್ಚಿಸಲು ಆಗ್ರಹ



ರಾಯಚೂರು: ನಗರದ ಎಲ್‌ಬಿಎಸ್ ನಗರದಲ್ಲಿ ಹಾಡಹಗಲೇ ಜನನಿಬಿಡ ಪ್ರದೇಶದಲ್ಲಿ ಅಮಾಯಕ ವ್ಯಾಪಾರಸ್ಥನನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆಯನ್ನು ತೀವ್ರವಾಗಿ ಖಂಡಿಸಿರುವ ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು, ನಗರದಲ್ಲಿ ಕಾನೂನು ಸುವ್ಯವಸ್ಥೆ ಬಲಪಡಿಸಿ ಸಾರ್ವಜನಿಕರಿಗೆ ಸೂಕ್ತ ರಕ್ಷಣೆ ಒದಗಿಸುವಂತೆ ಜಿಲ್ಲಾಡಳಿತವನ್ನು ಆಗ್ರಹಿಸಿದ್ದಾರೆ.

ಶಿವರಾಮೇಗೌಡರ ಕರ್ನಾಟಕ ರಕ್ಷಣಾ ವೇದಿಕೆ, ಜಿಲ್ಲಾ ಕನ್ನಡ ಕ್ರಿಯಾ ಸಮಿತಿ ಹಾಗೂ ಕನ್ನಡ ಮಿತ್ರ ಕೂಟದ ವತಿಯಿಂದ ಹತ್ಯೆ ಘಟನೆಯನ್ನು ಖಂಡಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ನಗರದಲ್ಲಿ ಹೆಚ್ಚುತ್ತಿರುವ ಅಪರಾಧ ಚಟುವಟಿಕೆಗಳು ಹಾಗೂ ಮಾದಕ ವಸ್ತುಗಳ ಹಾವಳಿಗೆ ಕಡಿವಾಣ ಹಾಕುವಂತೆ ಒತ್ತಾಯಿಸಲಾಗಿದೆ.

ಜಿಲ್ಲೆಯಲ್ಲಿ ಈ ಹಿಂದೆ ಮಹಿಳೆಯರ ಮೇಲಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳು ಸಾರ್ವಜನಿಕರನ್ನು ಬೆಚ್ಚಿಬೀಳಿಸಿದ್ದವು. ಆ ಘಟನೆಗಳ ನೆನಪು ಮಾಸುವ ಮುನ್ನವೇ ನಗರದ ಜನನಿಬಿಡ ಪ್ರದೇಶದಲ್ಲಿ ಕ್ಷುಲ್ಲಕ ಕಾರಣಕ್ಕೆ ವ್ಯಾಪಾರಸ್ಥನೊಬ್ಬನನ್ನು ಹತ್ಯೆ ಮಾಡಿರುವುದು ನಾಗರಿಕರಲ್ಲಿ ಆತಂಕ ಸೃಷ್ಟಿಸಿದೆ. ಕುಟುಂಬಕ್ಕೆ ಆಧಾರವಾಗಿದ್ದ ಯುವಕನನ್ನು ಅಮಾನುಷವಾಗಿ ಕೊಲೆ ಮಾಡಿರುವುದು ಅತ್ಯಂತ ಖಂಡನೀಯ ಎಂದು ಸಂಘಟನೆಗಳ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಸಾರ್ವಜನಿಕರ ಸಮ್ಮುಖದಲ್ಲಿಯೇ ಯಾವುದೇ ಭಯವಿಲ್ಲದೆ ಇಂತಹ ಭೀಕರ ಕೃತ್ಯ ನಡೆಯುತ್ತಿರುವುದು ಕಾನೂನು ಸುವ್ಯವಸ್ಥೆಯ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಅಪರಾಧ ಪ್ರಕರಣಗಳು ಮರುಕಳಿಸದಂತೆ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರು ನಿರ್ಭಯವಾಗಿ ಓಡಾಡುವ ವಾತಾವರಣ ನಿರ್ಮಿಸುವುದು ಜಿಲ್ಲಾಡಳಿತದ ಆದ್ಯ ಕರ್ತವ್ಯವಾಗಬೇಕು ಎಂದು ಒತ್ತಾಯಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ನಗರದಲ್ಲಿ ಗಾಂಜಾ ಸೇರಿದಂತೆ ವಿವಿಧ ಮಾದಕ ವಸ್ತುಗಳ ಮಾರಾಟ ಮತ್ತು ಸೇವನೆ ಹೆಚ್ಚುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಕೇಳಿಬರುತ್ತಿವೆ. ಯುವಕರು ದುಶ್ಚಟಗಳಿಗೆ ಬಲಿಯಾಗುತ್ತಿರುವುದನ್ನು ತಡೆಗಟ್ಟಲು ಪೊಲೀಸ್ ಇಲಾಖೆ ವಿಶೇಷ ಕಾರ್ಯಾಚರಣೆ ನಡೆಸಬೇಕು. ಮಾದಕ ವಸ್ತುಗಳ ಅಕ್ರಮ ಮಾರಾಟ ಮತ್ತು ಸರಬರಾಜಿನಲ್ಲಿ ತೊಡಗಿರುವವರನ್ನು ಪತ್ತೆಹಚ್ಚಿ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದ್ದಾರೆ.

ವ್ಯಾಪಾರಸ್ಥನ ಹತ್ಯೆ ಪ್ರಕರಣದ ಆರೋಪಿಯನ್ನು ಬಂಧಿಸಿರುವುದು ಸ್ವಾಗತಾರ್ಹ. ಆದರೆ ಕೇವಲ ಆರೋಪಿಯ ಬಂಧನದಿಂದ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯುವುದಿಲ್ಲ. ಇಂತಹ ಘಟನೆಗಳಿಗೆ ಕಾರಣವಾಗುವ ಅಪರಾಧ ಚಟುವಟಿಕೆಗಳನ್ನು ನಿಯಂತ್ರಿಸಲು ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ. ಮಾದಕ ವಸ್ತುಗಳ ಮಾರಾಟದ ಜಾಲದ ಬಗ್ಗೆ ಸಮಗ್ರ ತನಿಖೆ ನಡೆಸಿ, ಅದರ ಹಿಂದೆ ಇರುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಜಿಲ್ಲಾಧಿಕಾರಿಗಳು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳೊಂದಿಗೆ ವಿಶೇಷ ಸಭೆ ನಡೆಸಬೇಕು. ನಗರ ಮತ್ತು ಜಿಲ್ಲೆಯಾದ್ಯಂತ ಅಪರಾಧ ಚಟುವಟಿಕೆಗಳ ನಿಯಂತ್ರಣಕ್ಕೆ ಸೂಕ್ತ ಕಾರ್ಯಯೋಜನೆ ರೂಪಿಸಬೇಕು. ಸಾರ್ವಜನಿಕರಲ್ಲಿ ಮೂಡಿರುವ ಭಯದ ವಾತಾವರಣವನ್ನು ದೂರ ಮಾಡಿ, ಜನಸಾಮಾನ್ಯರ ಜೀವ ಮತ್ತು ಆಸ್ತಿಗೆ ರಕ್ಷಣೆ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಶಿವರಾಮೇಗೌಡರ ಕರ್ನಾಟಕ ರಕ್ಷಣಾ ವೇದಿಕೆಯ ರಾಯಚೂರು ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ ಕುಮಾರ ಸಿ.ಕೆ. ಜೈನ್, ಜಿಲ್ಲಾ ಕನ್ನಡ ಕ್ರಿಯಾ ಸಮಿತಿ ಅಧ್ಯಕ್ಷ ರಫೀಕ್ ಅಹ್ಮದ್, ಜಿಲ್ಲಾ ಕನ್ನಡ ಕ್ರಿಯಾ ಸಮಿತಿ ಹಾಗೂ ಕನ್ನಡ ಮಿತ್ರ ಕೂಟದ ಪ್ರಧಾನ ಕಾರ್ಯದರ್ಶಿ ರಾಮಣ್ಣ ಮ್ಯಾದಾರ ಸೇರಿದಂತೆ ಸಂಘಟನೆಗಳ ಮುಖಂಡರು ಜಿಲ್ಲಾಡಳಿತಕ್ಕೆ ಒತ್ತಾಯಿಸಿದ್ದಾರೆ.

# ಕ್ಷಯರೋಗದ ಲಕ್ಷಣ ಕಂಡುಬಂದರೆ ತಕ್ಷಣ ಪರೀಕ್ಷೆ ಮಾಡಿಸಿಕೊಳ್ಳಿ: ಡಾ. ಆರ್.ಎಸ್. ಹುಲಿಮನಿಗೌಡ



ದೇವದುರ್ಗ: ಕ್ಷಯರೋಗ ಮುಕ್ತ ಸಮಾಜ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದ್ದು, ಆರೋಗ್ಯ ಇಲಾಖೆಯ ಸಿಬ್ಬಂದಿ ಮನೆಮನೆಗೆ ಭೇಟಿ ನೀಡಿ ನಡೆಸುವ ಸಕ್ರಿಯ ಕ್ಷಯರೋಗ ಪತ್ತೆ ಕಾರ್ಯಕ್ಕೆ ಪ್ರತಿಯೊಬ್ಬರೂ ಸಹಕರಿಸಬೇಕು. ರೋಗದ ಲಕ್ಷಣಗಳು ಕಂಡುಬಂದಲ್ಲಿ ನಿರ್ಲಕ್ಷ್ಯ ವಹಿಸದೆ ತಕ್ಷಣ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕು ಎಂದು ಜಾಲಹಳ್ಳಿ ಸಮುದಾಯ ಆರೋಗ್ಯ ಕೇಂದ್ರದ ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ. ಆರ್.ಎಸ್. ಹುಲಿಮನಿಗೌಡ ಕರೆ ನೀಡಿದರು.

ತಾಲೂಕಿನ ಜಾಲಹಳ್ಳಿ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳ ಕಚೇರಿ ಹಾಗೂ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಹಯೋಗದಲ್ಲಿ ಸೋಮವಾರ ಆಯೋಜಿಸಿದ್ದ ಸಕ್ರಿಯ ಕ್ಷಯರೋಗ ಪತ್ತೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ಷಯರೋಗವನ್ನು ಆರಂಭಿಕ ಹಂತದಲ್ಲಿಯೇ ಪತ್ತೆಹಚ್ಚಿ ಸೂಕ್ತ ಚಿಕಿತ್ಸೆ ಒದಗಿಸುವ ಮೂಲಕ ರೋಗ ಹರಡುವಿಕೆಯನ್ನು ತಡೆಗಟ್ಟುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ ಗ್ರಾಮೀಣ ಪ್ರದೇಶಗಳಲ್ಲಿನ ಮನೆಗಳಿಗೆ ಭೇಟಿ ನೀಡಿ ಸಾರ್ವಜನಿಕರ ಆರೋಗ್ಯ ಸ್ಥಿತಿಗತಿ ಪರಿಶೀಲಿಸಲಿದ್ದಾರೆ ಎಂದು ತಿಳಿಸಿದರು.

ರಾಯಚೂರು ಜಿಲ್ಲೆಯಲ್ಲಿ ಅಕ್ಟೋಬರ್ 27ರಿಂದ ಡಿಸೆಂಬರ್ 8ರವರೆಗೆ ಸಕ್ರಿಯ ಕ್ಷಯರೋಗ ಪತ್ತೆ ಅಭಿಯಾನ ನಡೆಯಲಿದೆ. ಆಯ್ದ ಆರೋಗ್ಯ ಉಪಕೇಂದ್ರಗಳು ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಒಟ್ಟು 33 ತಂಡಗಳು ಕಾರ್ಯನಿರ್ವಹಿಸಲಿದ್ದು, 28,588 ಜನರನ್ನು ತಪಾಸಣಾ ವ್ಯಾಪ್ತಿಗೆ ಒಳಪಡಿಸುವ ಗುರಿ ಹೊಂದಲಾಗಿದೆ. ಇದಕ್ಕಾಗಿ 18 ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ ಎಂದು ವಿವರಿಸಿದರು.

ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಹಾಗೂ ಸ್ವಯಂಸೇವಕರು ಮನೆಮನೆಗೆ ತೆರಳಿ ಕುಟುಂಬದ ಸದಸ್ಯರ ಆರೋಗ್ಯದ ಕುರಿತು ಮಾಹಿತಿ ಸಂಗ್ರಹಿಸಲಿದ್ದಾರೆ. ಕ್ಷಯರೋಗದ ಶಂಕಿತ ಲಕ್ಷಣಗಳು ಕಂಡುಬರುವ ವ್ಯಕ್ತಿಗಳನ್ನು ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ ಅಥವಾ ಸರ್ಕಾರಿ ಆಸ್ಪತ್ರೆಗೆ ಕಳುಹಿಸಿ ಕಫ ಪರೀಕ್ಷೆ ಹಾಗೂ ಎಕ್ಸ್‌ರೇ ತಪಾಸಣೆ ನಡೆಸಲಾಗುವುದು. ರೋಗ ದೃಢಪಟ್ಟವರಿಗೆ ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಉಚಿತ ಚಿಕಿತ್ಸೆ ಒದಗಿಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿ ಡಾ. ನಾಗರಾಜ್ ಹೂಗಾರ್ ಮಾತನಾಡಿ, ಕ್ಷಯರೋಗವು ಸೂಕ್ತ ಚಿಕಿತ್ಸೆಯಿಂದ ಸಂಪೂರ್ಣ ಗುಣಪಡಿಸಬಹುದಾದ ಕಾಯಿಲೆಯಾಗಿದೆ. ಎರಡು ವಾರಗಳಿಗಿಂತ ಹೆಚ್ಚು ಕಾಲ ನಿರಂತರ ಕೆಮ್ಮು, ಕಫದಲ್ಲಿ ರಕ್ತ ಕಾಣಿಸಿಕೊಳ್ಳುವುದು, ಹಸಿವು ಕಡಿಮೆಯಾಗುವುದು, ದೇಹದ ತೂಕ ಇಳಿಕೆಯಾಗುವುದು ಹಾಗೂ ಎದೆನೋವಿನಂತಹ ಲಕ್ಷಣಗಳು ಕಂಡುಬಂದರೆ ವಿಳಂಬ ಮಾಡದೆ ವೈದ್ಯರನ್ನು ಸಂಪರ್ಕಿಸಬೇಕು ಎಂದು ಸಲಹೆ ನೀಡಿದರು.

ಕ್ಷಯರೋಗಕ್ಕೆ ಸಾಮಾನ್ಯವಾಗಿ ಆರು ತಿಂಗಳ ಚಿಕಿತ್ಸಾ ಕ್ರಮವಿದ್ದು, ವೈದ್ಯರ ಸೂಚನೆಯಂತೆ ಔಷಧಿಗಳನ್ನು ನಿಯಮಿತವಾಗಿ ಸೇವಿಸುವುದು ಅತ್ಯಂತ ಮುಖ್ಯವಾಗಿದೆ. ರೋಗದ ಲಕ್ಷಣಗಳು ಕಡಿಮೆಯಾದರೂ ವೈದ್ಯರ ಸಲಹೆಯಿಲ್ಲದೆ ಮಧ್ಯದಲ್ಲಿಯೇ ಔಷಧಿ ಸೇವನೆ ನಿಲ್ಲಿಸಬಾರದು. ಸಂಪೂರ್ಣ ಚಿಕಿತ್ಸಾ ಅವಧಿಯನ್ನು ಪೂರ್ಣಗೊಳಿಸುವುದರಿಂದ ರೋಗದಿಂದ ಗುಣಮುಖರಾಗಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕ್ಷಯರೋಗಿಗಳಿಗೆ ಚಿಕಿತ್ಸೆಯ ಅವಧಿಯಲ್ಲಿ ಪೌಷ್ಟಿಕ ಆಹಾರ ಸೇವನೆಗೆ ನೆರವಾಗುವ ಉದ್ದೇಶದಿಂದ ಸರ್ಕಾರ ಮಾಸಿಕ ₹1,000 ಆರ್ಥಿಕ ಸಹಾಯವನ್ನು ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ಒದಗಿಸುತ್ತಿದೆ. ಅರ್ಹ ಫಲಾನುಭವಿಗಳು ಈ ಸೌಲಭ್ಯವನ್ನು ಪಡೆದುಕೊಂಡು ಆರೋಗ್ಯ ಸುಧಾರಣೆಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಕ್ಷಯರೋಗದ ಬಗ್ಗೆ ಸಾರ್ವಜನಿಕರಲ್ಲಿ ಇರುವ ತಪ್ಪು ಕಲ್ಪನೆಗಳನ್ನು ದೂರ ಮಾಡಿ, ರೋಗಿಗಳನ್ನು ತಾರತಮ್ಯವಿಲ್ಲದೆ ಬೆಂಬಲಿಸುವುದು ಅಗತ್ಯವಾಗಿದೆ. ರೋಗವನ್ನು ಮುಚ್ಚಿಡದೆ ಸಕಾಲದಲ್ಲಿ ಪರೀಕ್ಷೆ ಮಾಡಿಸಿಕೊಂಡು ಚಿಕಿತ್ಸೆ ಪಡೆಯುವುದರಿಂದ ವೈಯಕ್ತಿಕ ಆರೋಗ್ಯದ ಜೊತೆಗೆ ಕುಟುಂಬ ಹಾಗೂ ಸಮಾಜದ ಆರೋಗ್ಯವನ್ನೂ ಕಾಪಾಡಬಹುದು ಎಂದು ವೈದ್ಯಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಕ್ಷಯರೋಗ ಮೇಲ್ವಿಚಾರಕ ಮಹೇಶ ನಾಯಕ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ದೇವೇಂದ್ರಪ್ಪ ಮತ್ತು ಚೇತನ್ ಕುಮಾರ್, ಫಾರ್ಮಸಿ ಅಧಿಕಾರಿ ಸುರೇಶ, ಪ್ರಯೋಗಾಲಯ ತಾಂತ್ರಿಕ ಅಧಿಕಾರಿ ಬಸ್ಸಮ್ಮ, ಎನ್‌ಸಿಡಿ ವಿಭಾಗದ ಲಚಮಣ್ಣ ಮತ್ತು ಮಲ್ಲಿಕಾರ್ಜುನ, ಎನ್‌ಜಿಒ ತಂಡದ ಸದಸ್ಯರು, ಆಶಾ ಕಾರ್ಯಕರ್ತೆಯರು ಹಾಗೂ ಸ್ವಯಂಸೇವಕರು ಉಪಸ್ಥಿತರಿದ್ದರು.

# ದುರ್ವಾಸನೆ ಬೀರುತ್ತಿರುವ ತಹಶೀಲ್ದಾರ್ ಕಚೇರಿ ಶೌಚಾಲಯ: ಸಾರ್ವಜನಿಕರ ಆಕ್ರೋಶ




ಲಿಂಗಸುಗೂರು: ಪಟ್ಟಣದ ತಾಲೂಕು ಆಡಳಿತದ ತಹಶೀಲ್ದಾರ್ ಕಚೇರಿಯಲ್ಲಿರುವ ಸಾರ್ವಜನಿಕ ಶೌಚಾಲಯ ದುರಸ್ತಿಯಿಲ್ಲದೆ ದುರ್ವಾಸನೆ ಬೀರುತ್ತಿದ್ದು, ಕಚೇರಿಗೆ ವಿವಿಧ ಕೆಲಸಗಳಿಗಾಗಿ ಆಗಮಿಸುವ ಸಾರ್ವಜನಿಕರು, ವಿಶೇಷವಾಗಿ ಮಹಿಳೆಯರು ತೀವ್ರ ತೊಂದರೆ ಅನುಭವಿಸುವಂತಾಗಿದೆ.

ತಾಲೂಕಿನ ವಿವಿಧ ಗ್ರಾಮೀಣ ಪ್ರದೇಶಗಳಿಂದ ನಿತ್ಯವೂ ನೂರಾರು ಜನರು ಕಂದಾಯ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಕೆಲಸಗಳಿಗಾಗಿ ತಹಶೀಲ್ದಾರ್ ಕಚೇರಿಗೆ ಆಗಮಿಸುತ್ತಾರೆ. ಆದರೆ ಕಚೇರಿ ಆವರಣದಲ್ಲಿರುವ ಶೌಚಾಲಯ ಬಳಕೆಗೆ ಯೋಗ್ಯವಾಗಿಲ್ಲದ ಕಾರಣ ಸಾರ್ವಜನಿಕರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಶೌಚಾಲಯದ ಸುತ್ತಮುತ್ತಲಿನ ಪ್ರದೇಶದಲ್ಲಿ ದುರ್ವಾಸನೆ ಹರಡುತ್ತಿದ್ದು, ಅಲ್ಲಿಗೆ ಬರುವ ಜನರು ಮೂಗು ಮುಚ್ಚಿಕೊಂಡು ಓಡಾಡುವಂತಾಗಿದೆ. ಸಾರ್ವಜನಿಕರಿಗೆ ಅತ್ಯಗತ್ಯವಾಗಿರುವ ಮೂಲಸೌಕರ್ಯವನ್ನು ಸಮರ್ಪಕವಾಗಿ ನಿರ್ವಹಿಸದ ತಾಲೂಕು ಆಡಳಿತದ ವಿರುದ್ಧ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಶೌಚಾಲಯದ ಮುಂಭಾಗದಲ್ಲಿ 'ಶೌಚಾಲಯ ದುರಸ್ತಿಯಲ್ಲಿದೆ' ಎಂಬ ನಾಮಫಲಕ ಅಳವಡಿಸಿ ಹಲವು ದಿನಗಳು ಕಳೆದರೂ ದುರಸ್ತಿ ಕಾರ್ಯ ಕೈಗೊಂಡಿಲ್ಲ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ. ಕೇವಲ ನಾಮಫಲಕ ಹಾಕುವುದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ. ಶೌಚಾಲಯವನ್ನು ದುರಸ್ತಿಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ.

ಸರ್ಕಾರಿ ಕಚೇರಿಗಳಿಗೆ ಬರುವ ಸಾರ್ವಜನಿಕರಿಗೆ ಕುಡಿಯುವ ನೀರು, ಸ್ವಚ್ಛ ಶೌಚಾಲಯ ಸೇರಿದಂತೆ ಕನಿಷ್ಠ ಮೂಲಸೌಕರ್ಯಗಳನ್ನು ಒದಗಿಸುವುದು ಆಡಳಿತದ ಜವಾಬ್ದಾರಿಯಾಗಿದೆ. ಅದರಲ್ಲೂ ಮಹಿಳೆಯರು ಹಾಗೂ ಹಿರಿಯ ನಾಗರಿಕರಿಗೆ ಶೌಚಾಲಯದ ಸಮಸ್ಯೆಯಿಂದ ಹೆಚ್ಚಿನ ಅನಾನುಕೂಲವಾಗುತ್ತಿದೆ ಎಂದು ಸಾರ್ವಜನಿಕರು ದೂರಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳ ಪರಿಶೀಲನೆ ನಡೆಸಿ, ಶೌಚಾಲಯದ ದುರಸ್ತಿ ಹಾಗೂ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕು. ಸಾರ್ವಜನಿಕರಿಗೆ ಅನುಕೂಲವಾಗುವಂತೆ ಶೌಚಾಲಯವನ್ನು ಶೀಘ್ರ ಬಳಕೆಗೆ ಮುಕ್ತಗೊಳಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ಶಶೀಲ್ ಜಿ. ನಮೋಶಿ ಗೆಲುವು: ಮಾನ್ವಿಯಲ್ಲಿ ಬಿಜೆಪಿ ಕಾರ್ಯಕರ್ತರಿಂದ ವಿಜಯೋತ್ಸವ



ಮಾನ್ವಿ: ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಅವರು ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಪಟ್ಟಣದ ಬಸವ ವೃತ್ತದಲ್ಲಿ ಭಾರತೀಯ ಜನತಾ ಪಕ್ಷದ ಮಾನ್ವಿ ಮಂಡಲದ ವತಿಯಿಂದ ವಿಜಯೋತ್ಸವ ಆಚರಿಸಲಾಯಿತು.

ಚುನಾವಣಾ ಫಲಿತಾಂಶದ ಹಿನ್ನೆಲೆಯಲ್ಲಿ ಬಸವ ವೃತ್ತದಲ್ಲಿ ಜಮಾಯಿಸಿದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಂಡು ಸಂಭ್ರಮಿಸಿದರು. ಪಕ್ಷದ ಕಾರ್ಯಕರ್ತರು ಘೋಷಣೆಗಳನ್ನು ಕೂಗುವ ಮೂಲಕ ತಮ್ಮ ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಾನ್ವಿ ಮಂಡಲ ಅಧ್ಯಕ್ಷ ವೀರಭದ್ರಗೌಡ ಭೋಗವತಿ ನೇತೃತ್ವದಲ್ಲಿ ನಡೆದ ವಿಜಯೋತ್ಸವದಲ್ಲಿ ಪಕ್ಷದ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಈಶಾನ್ಯ ಶಿಕ್ಷಕರ ಕ್ಷೇತ್ರವು ಕಲ್ಯಾಣ ಕರ್ನಾಟಕದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ವ್ಯಾಪ್ತಿಯನ್ನು ಒಳಗೊಂಡಿದ್ದು, ಈ ಚುನಾವಣೆಯಲ್ಲಿ ಬಿಜೆಪಿಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಯಾಗಿ ಶಶೀಲ್ ಜಿ. ನಮೋಶಿ ಸ್ಪರ್ಧಿಸಿದ್ದರು. ಅವರ ಗೆಲುವಿನ ಸುದ್ದಿ ತಿಳಿಯುತ್ತಿದ್ದಂತೆ ಮಾನ್ವಿಯ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವದಲ್ಲಿ ಪಾಲ್ಗೊಂಡು ಸಂತಸ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಬಿಜೆಪಿ ಮಾನ್ವಿ ಮಂಡಲ ಪ್ರಧಾನ ಕಾರ್ಯದರ್ಶಿ ಗುರುಸಿದ್ದಪ್ಪ ಕಣ್ಣೂರು, ಮಾಜಿ ಅಧ್ಯಕ್ಷ ಜೆ. ಸುಧಾರ್ಕ, ಮುಖಂಡರಾದ ವಕೀಲ ವೀರನಗೌಡ, ಶ್ರೀಧರ ಸ್ವಾಮಿ, ಜಗದೀಶ್ ವತ್ತೂರು, ವಕೀಲ ರಾಯಪ್ಪ, ಶಿವಲಿಂಗಯ್ಯ ಸ್ವಾಮಿ, ಚಂದ್ರಶೇಖರ ನಾಯಕ, ರವಿಕುಮಾರ ಆಲ್ದಾಳ, ಕುಮಾರಸ್ವಾಮಿ ಮೇದಾರ, ಬಸನಗೌಡ ಕರಡಿಗುಡ್ಡ, ವಿರುಪಾಕ್ಷಿಗೌಡ ನುಡೋಣಿ, ಗೋಪಾಲ ಇಬ್ರಾಂಪುರ, ಕೆ. ವೆಂಕಟೇಶ, ಈರಣ್ಣ ನಾಯಕ, ಸುನೀಲ ಸ್ವಾಮಿ, ವಿಜಯಕುಮಾರ್ ಮೇಟಿ, ರಾಜೇಂದ್ರ ವಟಗಲ್, ಭಾಸ್ಕರ್ ಜಗಲಿ, ಬಸವರಾಜ ಗುತ್ತೇದಾರ, ಜಗದೀಶ ಕುರ್ಡಿ ಸೇರಿದಂತೆ ನೂರಾರು ಬಿಜೆಪಿ ಕಾರ್ಯಕರ್ತರು ಭಾಗವಹಿಸಿದ್ದರು.

# ಕುಡಿಯುವ ನೀರಿಗಾಗಿ ನಂದಿಹಾಳ ಹಳ್ಳಕ್ಕೆ ನೀರು ಹರಿಸಲು ಆಗ್ರಹ: ರೈತರಿಂದ ತಹಸೀಲ್ದಾರ್‌ಗೆ ಮನವಿ



ಮಾನ್ವಿ: ತಾಲೂಕಿನ ನಂದಿಹಾಳ ಹಳ್ಳದ ವ್ಯಾಪ್ತಿಯ ಗ್ರಾಮಗಳಲ್ಲಿ ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತೀವ್ರ ಅಭಾವ ಎದುರಾಗಿದ್ದು, ಗೋಲದಿನ್ನಿ ಎಸ್ಕೇಪ್ ಕಾಲುವೆ ಮೂಲಕ ಹಳ್ಳಕ್ಕೆ ಕೂಡಲೇ ನೀರು ಹರಿಸುವಂತೆ ಒತ್ತಾಯಿಸಿ ಗೋಲದಿನ್ನಿ ಎಸ್ಕೇಪ್ ರೈತ ಹೋರಾಟ ಸಮಿತಿಯ ಪದಾಧಿಕಾರಿಗಳು ತಹಸೀಲ್ದಾರ್ ಭೀಮರಾಯ ರಾಮಸಮುದ್ರ ಅವರಿಗೆ ಮನವಿ ಸಲ್ಲಿಸಿದರು.

ನಂದಿಹಾಳ ಹಳ್ಳದ ಸಮೀಪ ಗೋಲದಿನ್ನಿ ಎಸ್ಕೇಪ್ ರೈತ ಹೋರಾಟ ಸಮಿತಿ ನೇತೃತ್ವದಲ್ಲಿ ನಡೆಯುತ್ತಿರುವ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹದ ಸ್ಥಳಕ್ಕೆ ತಹಸೀಲ್ದಾರ್ ಭೇಟಿ ನೀಡಿದ ಸಂದರ್ಭದಲ್ಲಿ ಗ್ರಾಮಸ್ಥರು ತಮ್ಮ ಸಮಸ್ಯೆಗಳನ್ನು ವಿವರಿಸಿ, ಕುಡಿಯುವ ನೀರಿನ ಸಮಸ್ಯೆಗೆ ತುರ್ತು ಪರಿಹಾರ ಕಲ್ಪಿಸುವಂತೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮನವಿ ಸಲ್ಲಿಸಿ ಮಾತನಾಡಿದ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶಿವಶಂಕ್ರಯ್ಯ ಸ್ವಾಮಿ, ಬರಗಾಲದ ಪರಿಣಾಮ ನಂದಿಹಾಳ ಹಳ್ಳದ ವ್ಯಾಪ್ತಿಗೆ ಒಳಪಡುವ ವಿವಿಧ ಗ್ರಾಮಗಳಲ್ಲಿ ನೀರಿನ ಸಮಸ್ಯೆ ದಿನದಿಂದ ದಿನಕ್ಕೆ ಉಲ್ಬಣಿಸುತ್ತಿದೆ. ಗ್ರಾಮಸ್ಥರು ಕುಡಿಯುವ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಜಾನುವಾರುಗಳಿಗೂ ಸಮರ್ಪಕವಾಗಿ ನೀರು ದೊರೆಯುತ್ತಿಲ್ಲ ಎಂದು ಆತಂಕ ವ್ಯಕ್ತಪಡಿಸಿದರು.

ಗ್ರಾಮೀಣ ಪ್ರದೇಶದ ಜನರ ಜೀವನೋಪಾಯಕ್ಕೆ ಕೃಷಿ ಹಾಗೂ ಪಶುಸಂಗೋಪನೆ ಪ್ರಮುಖ ಆಧಾರವಾಗಿವೆ. ಆದರೆ ನೀರಿನ ಕೊರತೆಯಿಂದ ಜನರ ದೈನಂದಿನ ಜೀವನದ ಜೊತೆಗೆ ಜಾನುವಾರುಗಳ ನಿರ್ವಹಣೆಯೂ ಕಷ್ಟಕರವಾಗಿದೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಸಮಸ್ಯೆಯ ಗಂಭೀರತೆಯನ್ನು ಅರಿತು ಗೋಲದಿನ್ನಿ ಎಸ್ಕೇಪ್ ಕಾಲುವೆಯಿಂದ ನಂದಿಹಾಳ ಹಳ್ಳಕ್ಕೆ ತಕ್ಷಣ ನೀರು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಸೀಲ್ದಾರ್ ಭೀಮರಾಯ ರಾಮಸಮುದ್ರ, ತಾಲೂಕಿನ ವಿವಿಧ ಗ್ರಾಮಗಳಲ್ಲಿ ಬರಗಾಲದಿಂದ ಕುಡಿಯುವ ನೀರಿನ ಸಮಸ್ಯೆ ಎದುರಾಗಿರುವುದು ಆಡಳಿತದ ಗಮನದಲ್ಲಿದೆ. ಈ ಕುರಿತು ಜಿಲ್ಲಾಧಿಕಾರಿ ಹಾಗೂ ನೀರಾವರಿ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಾಗಿದೆ. ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವುದಕ್ಕೆ ಮೊದಲ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ತಾಲೂಕಿನ ಕುಡಿಯುವ ನೀರಿನ ಕೆರೆಗಳನ್ನು ತುಂಬಿಸುವ ಕಾರ್ಯಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ. ಈ ಕೆರೆಗಳು ಭರ್ತಿಯಾದ ನಂತರ ಗೋಲದಿನ್ನಿ ಎಸ್ಕೇಪ್ ಕಾಲುವೆಯಿಂದ ನಂದಿಹಾಳ ಹಳ್ಳಕ್ಕೆ ನೀರು ಹರಿಸಲು ಅಗತ್ಯ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಅಲ್ಲದೆ, ಗ್ರಾಮಸ್ಥರು ಮುಂದಿಟ್ಟಿರುವ ಇತರ ಬೇಡಿಕೆಗಳಿಗೂ ಸ್ಪಂದಿಸಲಾಗುತ್ತಿದೆ. ರಾಜ್ಯ ಹೆದ್ದಾರಿಯಲ್ಲಿ ಬಸ್ ನಿಲ್ದಾಣ ಹಾಗೂ ವಿದ್ಯುತ್ ದೀಪಗಳನ್ನು ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ಪೂರೈಕೆಯನ್ನು ಸುಧಾರಿಸುವ ಉದ್ದೇಶದಿಂದ ದುರಸ್ತಿಗೊಂಡಿರುವ ಕೊಳವೆಬಾವಿಗಳನ್ನು ಸರಿಪಡಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ ಎಂದು ವಿವರಿಸಿದರು.

ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ತ್ವರಿತವಾಗಿ ಕ್ರಮ ಕೈಗೊಳ್ಳಬೇಕು. ನೀರಿನ ಅಭಾವದಿಂದ ಸಂಕಷ್ಟ ಎದುರಿಸುತ್ತಿರುವ ಗ್ರಾಮಸ್ಥರು ಹಾಗೂ ರೈತರ ಬೇಡಿಕೆಗಳಿಗೆ ಆದ್ಯತೆ ನೀಡಬೇಕು ಎಂದು ಹೋರಾಟ ಸಮಿತಿಯ ಪದಾಧಿಕಾರಿಗಳು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ರಾಮನಗೌಡ ನಂದಿಹಾಳ, ರಾಮಕೃಷ್ಣ ಅಮರಾವತಿ, ಶರಣಬಸವ ನಂದಿಹಾಳ, ವೀರಭದ್ರಗೌಡ ಬೋಗವತಿ, ಶ್ರೀಧರಸ್ವಾಮಿ, ಜಗದೀಶ ಓತೂರು ಕೋಟ್ನೇಕಲ್, ಶಶಿಧರಗೌಡ ನೀರಮಾನ್ವಿ, ಮಲ್ಲಭದ್ರಗೌಡ ನೀರಮಾನ್ವಿ, ಬಸವಗೌಡ ನಂದಿಹಾಳ, ಚನ್ನಪ್ಪಗೌಡ ನಂದಿಹಾಳ, ಈರಯ್ಯ ಪೂಜಾರಿ, ಶಿವಕುಮಾರಗೌಡ ಅಮರಾವತಿ, ವಕೀಲ ಸತ್ಯನಾರಾಯಣ, ಗಡಿಲಿಂಗಪ್ಪ ಬುದ್ದಿನಿ, ಸಂತೋಷ ಜಾನೇಕಲ್, ಶರೀಫ್ ನಸಲಾಪೂರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ನೂರಾರು ರೈತರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# ಯಲಗಲದಿನ್ನಿಯಲ್ಲಿ ಬಫರ್ ಜೋನ್ ಪ್ರದೇಶದ ನಿವೇಶನಗಳ ಅಕ್ರಮ ಮಾರಾಟ ಆರೋಪ: ಖರೀದಿದಾರರಿಗೆ ಸಂಕಷ್ಟ


ನಗರ ಯೋಜನಾ ಪ್ರಾಧಿಕಾರ ಲಿಂಗಸಗೂರು

ಉಲ್ಲೇಖ:- 1) ಅರ್ಜಿದಾರರ ಮನವಿ ದಿನಾಂಕ: 31-08-2026

ದಿನಾಂಕ:- 24-08-2026

3) ಸಭೆಯ ನಿರ್ಣಯ ದಿನಾಂಕ:-22-09-2026

ಲಿಂಗಸುಗೂರು: ತಾಲೂಕಿನ ಕಾಳಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಲಗಲದಿನ್ನಿ ಗ್ರಾಮದಲ್ಲಿ 220 ಕೆ.ವಿ. ಅಧಿಕ ಒತ್ತಡದ ವಿದ್ಯುತ್ ಮಾರ್ಗದ ಬಫರ್ ಜೋನ್ ವ್ಯಾಪ್ತಿಯಲ್ಲಿರುವ ಉದ್ಯಾನವನ, ನಾಗರಿಕ ಸೌಲಭ್ಯ ಹಾಗೂ ರಸ್ತೆಗಳಿಗೆ ಮೀಸಲಿಟ್ಟ ಜಾಗವನ್ನು ನಿವೇಶನಗಳನ್ನಾಗಿ ಪರಿವರ್ತಿಸಿ ಅಕ್ರಮವಾಗಿ ಮಾರಾಟ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ನಗರ ಯೋಜನಾ ಪ್ರಾಧಿಕಾರವು ತಾತ್ಕಾಲಿಕ ಬಡಾವಣೆ ವಿನ್ಯಾಸವನ್ನು ರದ್ದುಗೊಳಿಸಿದ್ದು, ನಿವೇಶನ ಖರೀದಿದಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಜಯ ಕರ್ನಾಟಕ ಸಂಘಟನೆ ಆರೋಪಿಸಿದೆ.

ಯಲಗಲದಿನ್ನಿ ಗ್ರಾಮದ ಸರ್ವೇ ನಂ. 65/★/2ರ 6 ಎಕರೆ 30 ಗುಂಟೆ, ಸರ್ವೇ ನಂ. 65/★/3ರ 2 ಎಕರೆ 35 ಗುಂಟೆ ಹಾಗೂ ಸರ್ವೇ ನಂ. 65/★/5ರ 5 ಎಕರೆ 10 ಗುಂಟೆ ಜಮೀನಿಗೆ ಜಿಲ್ಲಾಧಿಕಾರಿಗಳ ಆದೇಶದಂತೆ ಭೂಪರಿವರ್ತನೆ ಮಾಡಲಾಗಿದೆ. ಆದರೆ ಈ ಜಮೀನುಗಳ ವ್ಯಾಪ್ತಿಯಲ್ಲಿ ಹಾದುಹೋಗಿರುವ 220 ಕೆ.ವಿ. ಅಧಿಕ ಒತ್ತಡದ ವಿದ್ಯುತ್ ಮಾರ್ಗದ ಕೆಳಭಾಗದಲ್ಲಿರುವ ಉದ್ಯಾನವನ, ನಾಗರಿಕ ಸೌಲಭ್ಯ ಮತ್ತು ರಸ್ತೆಗಾಗಿ ಮೀಸಲಿಟ್ಟ ಪ್ರದೇಶಗಳನ್ನು ನಿವೇಶನಗಳನ್ನಾಗಿ ಗುರುತಿಸಿ ಮಾರಾಟ ಮಾಡಲಾಗಿದೆ ಎಂದು ಸಂಘಟನೆ ದೂರಿದೆ.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ನೀಡಿರುವ ಪತ್ರದ ಆಧಾರದಲ್ಲಿ ನಗರ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರು ಸಂಬಂಧಿಸಿದ ಬಡಾವಣೆಯ ತಾತ್ಕಾಲಿಕ ವಿನ್ಯಾಸವನ್ನು ರದ್ದುಗೊಳಿಸಿ ಆದೇಶಿಸಿದ್ದಾರೆ ಎನ್ನಲಾಗಿದೆ. ಇದರಿಂದ ಈಗಾಗಲೇ ಲಕ್ಷಾಂತರ ರೂಪಾಯಿ ಪಾವತಿಸಿ ನಿವೇಶನಗಳನ್ನು ಖರೀದಿಸಿರುವ ಸಾರ್ವಜನಿಕರು ಆತಂಕಕ್ಕೆ ಒಳಗಾಗಿದ್ದಾರೆ.

220 ಕೆ.ವಿ. ವಿದ್ಯುತ್ ಪ್ರಸರಣ ಮಾರ್ಗದ ವ್ಯಾಪ್ತಿಯಲ್ಲಿ ಬಡಾವಣೆ ನಿರ್ಮಿಸುವ ಮೊದಲು ಸಂಬಂಧಪಟ್ಟ ವಿದ್ಯುತ್ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆಯುವುದು ಅಗತ್ಯವಾಗಿದೆ. ಆದರೆ ಈ ನಿಯಮವನ್ನು ಪಾಲಿಸದೆ ಬಡಾವಣೆ ವಿನ್ಯಾಸಕ್ಕೆ ಅನುಮತಿ ಪಡೆಯಲು ಮುಂದಾಗಿರುವುದು ನಿಯಮಗಳ ಉಲ್ಲಂಘನೆಯಾಗಿದೆ ಎಂದು ಜಯ ಕರ್ನಾಟಕ ಸಂಘಟನೆ ಆರೋಪಿಸಿದೆ.

ಅಧಿಕ ಒತ್ತಡದ ವಿದ್ಯುತ್ ಮಾರ್ಗದ ಕೆಳಭಾಗದಲ್ಲಿ ಉದ್ಯಾನವನ, ನಾಗರಿಕ ಸೌಲಭ್ಯ ಹಾಗೂ ರಸ್ತೆಗಳನ್ನು ಗುರುತಿಸಿರುವುದರಿಂದ ಸಾರ್ವಜನಿಕರ ಸುರಕ್ಷತೆಗೆ ಅಪಾಯ ಉಂಟಾಗುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಸಂಘಟನೆ ನೀಡಿದ ದೂರನ್ನು ಪರಿಗಣಿಸಿ ಸಂಬಂಧಪಟ್ಟ ಪ್ರಾಧಿಕಾರವು ವಿನ್ಯಾಸ ರದ್ದತಿಗೆ ಕ್ರಮ ಕೈಗೊಂಡಿದೆ ಎಂದು ತಿಳಿಸಲಾಗಿದೆ.

ಕೆಪಿಟಿಸಿಎಲ್ ಅಧಿಕಾರಿಗಳು ಸಂಬಂಧಪಟ್ಟ ಮೇಲಧಿಕಾರಿಗಳ ಗಮನಕ್ಕೆ ಈ ವಿಷಯ ತಂದಿದ್ದು, 220 ಕೆ.ವಿ. ವಿದ್ಯುತ್ ಮಾರ್ಗದ ಮಧ್ಯಭಾಗದಿಂದ ಎರಡೂ ಬದಿಗಳಲ್ಲಿ ತಲಾ 17.5 ಮೀಟರ್‌ನಂತೆ ಒಟ್ಟು 35 ಮೀಟರ್ ವ್ಯಾಪ್ತಿಯಲ್ಲಿ ಕಟ್ಟಡ, ಉದ್ಯಾನವನ ಹಾಗೂ ರಸ್ತೆ ನಿರ್ಮಾಣಕ್ಕೆ ಅವಕಾಶವಿಲ್ಲ ಎಂದು ಪತ್ರದ ಮೂಲಕ ತಿಳಿಸಿರುವುದಾಗಿ ಸಂಘಟನೆ ಹೇಳಿದೆ.

ವಿದ್ಯುತ್ ಮಾರ್ಗದ ಸುರಕ್ಷತಾ ವ್ಯಾಪ್ತಿಯನ್ನು ಪರಿಗಣಿಸದೆ ಬಡಾವಣೆ ವಿನ್ಯಾಸ ರೂಪಿಸಿರುವುದರಿಂದ ಸಾರ್ವಜನಿಕರ ಜೀವಕ್ಕೆ ಅಪಾಯ ಎದುರಾಗುವ ಸಾಧ್ಯತೆಯಿದ್ದು, ನಿಯಮ ಉಲ್ಲಂಘಿಸಿ ಸಿದ್ಧಪಡಿಸಿರುವ ಬಡಾವಣೆ ನಕ್ಷೆಯನ್ನು ರದ್ದುಗೊಳಿಸಬೇಕು ಎಂದು ಸಂಘಟನೆ ಒತ್ತಾಯಿಸಿದೆ.

ಇದಲ್ಲದೆ, ಯಲಗಲದಿನ್ನಿ ಬಡಾವಣೆಗೆ ಸಂಬಂಧಿಸಿದ ಭೂಪರಿವರ್ತನೆ ಪ್ರಕ್ರಿಯೆಯಲ್ಲಿ ಜಿಲ್ಲಾಧಿಕಾರಿಗಳಿಗೆ ಮಾಹಿತಿ ಒದಗಿಸಿದ ಕಂದಾಯ ಇಲಾಖೆಯ ಅಧಿಕಾರಿಗಳ ಪಾತ್ರದ ಬಗ್ಗೆಯೂ ತನಿಖೆ ನಡೆಸಬೇಕು ಎಂದು ಆಗ್ರಹಿಸಲಾಗಿದೆ.

ಕಾಳಾಪುರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಹೇಶ ಹಾಗೂ ಗ್ರೇಡ್ ಕಾರ್ಯದರ್ಶಿ ಬಸವರಾಜ ಅವರು ನಗರ ಯೋಜನಾ ಪ್ರಾಧಿಕಾರದ ಅಂತಿಮ ಅನುಮೋದನೆ ದೊರೆಯುವ ಮೊದಲೇ ವಿವಾದಿತ ನಿವೇಶನಗಳಿಗೆ ಖಾತಾ ನಕಲುಗಳನ್ನು ನೀಡಿ ನೋಂದಣಿಗೆ ಅವಕಾಶ ಮಾಡಿಕೊಟ್ಟಿದ್ದಾರೆ ಎಂದು ಸಂಘಟನೆ ಆರೋಪಿಸಿದೆ.

ಈ ಪ್ರಕರಣದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಕಾರ್ಯವೈಖರಿಯನ್ನು ಸಮಗ್ರವಾಗಿ ತನಿಖೆ ನಡೆಸಿ, ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಬೇಕು. ಅಲ್ಲದೆ, ಹಣ ಪಾವತಿಸಿ ನಿವೇಶನಗಳನ್ನು ಖರೀದಿಸಿರುವ ಸಾರ್ವಜನಿಕರಿಗೆ ಅನ್ಯಾಯವಾಗದಂತೆ ಸೂಕ್ತ ಪರಿಹಾರ ಹಾಗೂ ನ್ಯಾಯ ಒದಗಿಸಬೇಕು ಎಂದು ಜಯ ಕರ್ನಾಟಕ ಸಂಘಟನೆ ಒತ್ತಾಯಿಸಿದೆ.

# ರೈತ ಸಂಘದ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಶಿವಪುತ್ರಗೌಡ ನಂದಿಹಾಳ ರಾಜೀನಾಮೆ




ಲಿಂಗಸುಗೂರು: ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ್ ಬಣ) ರಾಯಚೂರು ಜಿಲ್ಲಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ತಮ್ಮೊಂದಿಗೆ ಸಂಘಟನೆಯ ವಿವಿಧ ಘಟಕಗಳ ಪದಾಧಿಕಾರಿಗಳೂ ಹುದ್ದೆಗಳಿಗೆ ರಾಜೀನಾಮೆ ಸಲ್ಲಿಸಿದ್ದಾರೆ ಎಂದು ಜಿಲ್ಲಾಧ್ಯಕ್ಷ ಶಿವಪುತ್ರಗೌಡ ನಂದಿಹಾಳ ತಿಳಿಸಿದರು.

ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಘಟನೆಯ ಜಿಲ್ಲಾಧ್ಯಕ್ಷ ಸ್ಥಾನದಿಂದ ತಮ್ಮನ್ನು ವಜಾಗೊಳಿಸಲಾಗಿದೆ ಎಂದು ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ್ ಗೋಡಿಹಾಳ ಅವರು ಭಾನುವಾರ ಸುದ್ದಿಗೋಷ್ಠಿಯಲ್ಲಿ ಹೇಳಿಕೆ ನೀಡಿದ್ದಾರೆ. ಆದರೆ ತಮ್ಮನ್ನು ಜಿಲ್ಲಾಧ್ಯಕ್ಷ ಸ್ಥಾನದಿಂದ ತೆಗೆದುಹಾಕುವ ಅಧಿಕಾರ ಅವರಿಗೆ ಇಲ್ಲ ಎಂದು ಸ್ಪಷ್ಟಪಡಿಸಿದರು.

ಸಂಘಟನೆಯ ರಾಜ್ಯಾಧ್ಯಕ್ಷರು ತಮ್ಮನ್ನು ರಾಯಚೂರು ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಿದ್ದರು. ಇದರ ಜೊತೆಗೆ ರಾಯಚೂರು, ವಿಜಯಪುರ ಹಾಗೂ ಯಾದಗಿರಿ ಜಿಲ್ಲೆಗಳ ಉಸ್ತುವಾರಿ ಜವಾಬ್ದಾರಿಯನ್ನೂ ವಹಿಸಿದ್ದರು. ಹೀಗಿರುವಾಗ ರಾಜ್ಯ ಪ್ರಧಾನ ಕಾರ್ಯದರ್ಶಿಗಳು ತಮ್ಮನ್ನು ಏಕಪಕ್ಷೀಯವಾಗಿ ಹುದ್ದೆಯಿಂದ ತೆಗೆದುಹಾಕಿರುವುದಾಗಿ ಹೇಳಿಕೆ ನೀಡುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಸಂಘಟನೆಯಲ್ಲಿನ ಇತ್ತೀಚಿನ ಬೆಳವಣಿಗೆಗಳ ಹಿನ್ನೆಲೆಯಲ್ಲಿ ತಾವು ಜಿಲ್ಲಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಲು ನಿರ್ಧರಿಸಿದ್ದು, ತಮ್ಮೊಂದಿಗೆ ಹಲವು ಪದಾಧಿಕಾರಿಗಳು ತಮ್ಮ ಹುದ್ದೆಗಳನ್ನು ತ್ಯಜಿಸಿದ್ದಾರೆ. ಆದರೆ ಸಂಘಟನೆಯ ಸಾಮಾನ್ಯ ಸದಸ್ಯರಾಗಿ ಮುಂದುವರಿಯುವುದಾಗಿ ತಿಳಿಸಿದರು.

ಜಿಲ್ಲಾ ಕಾರ್ಯಾಧ್ಯಕ್ಷ ಆನಂದ ಕುಂಬಾರ, ಪ್ರಧಾನ ಕಾರ್ಯದರ್ಶಿ ಹನುಮಂತ, ಮುದಗಲ್ ಹೋಬಳಿ ಅಧ್ಯಕ್ಷ ಲಕ್ಷ್ಮಣ, ಈಚನಾಳ ಗ್ರಾಮ ಘಟಕದ ಅಧ್ಯಕ್ಷ ಮಲ್ಲೇಶಪ್ಪ, ತಾಲೂಕು ಉಪಾಧ್ಯಕ್ಷ ಹನುಮಗೌಡ ದೇವರಭೂಪುರ ಹಾಗೂ ಗುಂಡಸಾಗರ ಗ್ರಾಮ ಘಟಕದ ಅಧ್ಯಕ್ಷ ಬಸವರಾಜ ಭಜಂತ್ರಿ ಅವರು ತಮ್ಮ ಹುದ್ದೆಗಳಿಗೆ ರಾಜೀನಾಮೆ ನೀಡಿರುವುದಾಗಿ ಶಿವಪುತ್ರಗೌಡ ನಂದಿಹಾಳ ಮಾಹಿತಿ ನೀಡಿದರು.

ರೈತರ ಸಮಸ್ಯೆಗಳ ಪರಿಹಾರಕ್ಕಾಗಿ ಹೋರಾಟ ನಡೆಸುವ ಉದ್ದೇಶದಿಂದ ಸಂಘಟನೆಯಲ್ಲಿ ಕಾರ್ಯನಿರ್ವಹಿಸಿದ್ದು, ಪದಾಧಿಕಾರಿಗಳ ಹುದ್ದೆಗಳಿಗೆ ರಾಜೀನಾಮೆ ನೀಡಿದರೂ ರೈತರ ಹಿತಾಸಕ್ತಿಗಾಗಿ ಹೋರಾಟ ಮುಂದುವರಿಸುವುದಾಗಿ ತಿಳಿಸಿದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K